# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 63 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 20–09–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 63 | RNI No: KARKAN/2023/88462 | Chitradurga | Date: 20-09-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಭಾರತ ಆರ್ಥಿಕ ಉನ್ನತಿಯಲ್ಲಿ ಎಂಎಸ್‌ಎಂಇ ಪಾತ್ರ ಬಹಳ ಮುಖ್ಯ 2

ಕ್ರೂಸರ್ ಪಲ್ಟಿ: ಮುಷ್ಕರಕ್ಕೆ ತೆರಳುತ್ತಿದ್ದ ಅಂಗನವಾಡಿ ಕಾರ್ಯಕರ್ತೆಯರಿಗೆ ಪೆಟ್ಟು 3

ಪರಿಶ್ರಮದ ಮೂಲಕ ವಿದ್ಯೆ ಪಡೆದು ಭವಿಷ್ಯ ಉಜ್ವಲಗೊಳಿಸಿಕೊಳ್ಳಿ: ವಯನಾಡು ಡಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರಾಜ್ಯ ಪ್ರಶಸ್ತಿಗೆ ಅರ್ಜಿ

» ಚಿತ್ರದುರ್ಗ

ವಿಕಲಚೇತನರ ಕ್ಷೇತ್ರದಲ್ಲಿ ಸಾಧನೆಗೈದ ವ್ಯಕ್ತಿ, ಸಂಸ್ಥೆ ಮತ್ತು ವಿಶೇಷ ಶಾಲೆಯ ಶಿಕ್ಷಕರಿಗೆ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರ ಅಧ್ಯಕ್ಷತೆಯ ಸಮಿತಿಯ ರಾಜ್ಯ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲಿದೆ. ವಿಕಲಚೇತನರ ಕ್ಷೇತ್ರದಲ್ಲಿ 15 ವರ್ಷ ಮೇಲ್ಪಟ್ಟು ಸೇವೆ ಸಲ್ಲಿಸಿರುವ ಶಿಕ್ಷಕರು, ಸಂಸ್ಥೆಗಳು, ಸಾಧನೆಗೈದ ವಿಕಲಚೇತರು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು www.dwdsc.kar.nic.in ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಅ.15 ರೊಳಗೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ದ್ವಿಪ್ರತಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಬಾಲಭವನದ ಆವರಣದಲ್ಲಿನ ಕಚೇರಿ ಹಾಗೂ ದೂರವಾಣಿ ಸಂಖ್ಯೆ 08194–235284 ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2024–25ನೇ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಸ್ಟೇಟ್ ಸ್ಕಾಲರ್‌ಶಿಫ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಸಂಬಂಧಪಟ್ಟ ಆಯಾ ಶಾಲೆಯ ಮುಖ್ಯೋಪಾಧ್ಯಾಯರನ್ನು ಸಂಪರ್ಕಿಸಲು ತಿಳಿಸಿದೆ. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಬೇಕಾದ ದಾಖಲೆಗಳ ವಿವರ: ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಎಸ್.ಎ.ಟಿ.ಎಸ್( ಖಂಖಿಖ) ಸಂಖ್ಯೆ, ಆಧಾರ್ ಕಾರ್ಡ್, ತಂದೆ–ತಾಯಿ ಅಥವಾ ಪೋಷಕರ ಆಧಾರ್ ಕಾರ್ಡ್, ರೇಷನ್ ಕಾರ್ಡ್ ಹಾಗೂ ಮೊಬೈಲ್ ನಂಬರ್, 1 ರಿಂದ 8ನೇ ತರಗತಿಯವರೆಗೆ ವಿದ್ಯಾರ್ಥಿಗಳ ಕುಟುಂಬದ ಆದಾಯ ರೂ.6ಲಕ್ಷ ಹಾಗೂ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳ ಕುಟುಂಬದ ಆದಾಯ ರೂ.2.50 ಲಕ್ಷ ಮೀರಿರಬಾರದು. ಕಡ್ಡಾಯವಾಗಿ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಆಧಾರ್ ಕಾರ್ಡ್‌ನ್ನು ಎನ್.ಪಿ.ಸಿ.ಐ (ಓಕಅಖ) ನಲ್ಲಿ ಸೀಡಿಂಗ್ ಮಾಡಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಚಿತ್ರದುರ್ಗ ಸಹಾಯಕ ನಿರ್ದೇಶಕರು (ಗ್ರೇಡ್–1) ತಿಳಿಸಿದ್ದಾರೆ.

### 15 ದಿನಗಳ ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ

» ಚಿತ್ರದುರ್ಗ

ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಮಹಿಳಾ ಪತಂಜಲಿ ಯೋಗ ಸಮಿತಿ, ಯುವ ಭಾರತ್ ಪತಂಜಲಿ ಕಿಸಾನ್ ಸೇವಾ ಸಮಿತಿ ವತಿಯಿಂದ 15 ದಿನಗಳ ಉಚಿತ ಯೋಗ, ಧ್ಯಾನ ಮತ್ತು ಪ್ರಾಣಾಯಾಮ ತರಬೇತಿ ಶಿಬಿರವನ್ನು ಇದೇ ಸೆ.22 ರಿಂದ ಅ.6 ರವರೆಗೆ ಬೆಳಿಗ್ಗೆ 5.30 ರಿಂದ 7 ಗಂಟೆಯವರೆಗೆ ಚಿತ್ರದುರ್ಗ ನಗರದ ಎನ್.ಹೆಚ್–13ರ ಪಿಳ್ಳೇಕೆರೆನಹಳ್ಳಿಯ ಬಾಪೂಜಿ ವಿದ್ಯಾಸಂಸ್ಥೆಯಲ್ಲಿ ಆಯೋಜಿಸಲಾಗಿದೆ. ಬಾಪೂಜಿ ವಿದ್ಯಾಸಂಸ್ಥೆ ಕಾರ್ಯದರ್ಶಿ ಡಾ.ಕೆ.ಎಂ.ವೀರೇಶ್ ಅಧ್ಯಕ್ಷತೆ ವಹಿಸುವರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಉದ್ಘಾಟನೆ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಬಿಲ್ಡರ್ ಅಸೋಸಿಯೇಷನ್ ಛೇರ್ಮನ್ ಎಂ.ಕೆ.ಅನಂತರೆಡ್ಡಿ , ಜಿ.ಪಂ ನಿವೃತ್ತ ಇಂಜಿನಿಯರ್ ಬಿ.ಶರಣಪ್ಪ ಭಾಗವಹಿಸುವರು. ಜಿಲ್ಲಾ ಪತಂಜಲಿ ಯೋಗ ಸಮಿತಿ ಅಧ್ಯಕ್ಷ ಎಂ.ವಿ.ದೇವಾನಂದ ನಾಯ್ಕ್ ಉಪಸ್ಥಿತರಿರುವರು. ಯೋಗ ಶಿಕ್ಷಕರಾದ ಜಿ.ಶ್ರೀನಿವಾಸ್, ಶ್ರೀಧರ್, ಲಲಿತಾ ಬೇದ್ರೆ, ವೀರೇಶ್, ತಿಪ್ಪೇಸ್ವಾಮಿ, ನಾಗೇಶ್, ಬಸವರಾಜ್ ಶಿಬಿರ ನಡೆಸಿಕೊಡುವರು. ಶಿಬಿರಾರ್ಥಿಗಳು ಬರುವಾಗ ಶೌಚಕ್ರಿಯೆಗಳನ್ನು ಮುಗಿಸಿ ಒಂದು ಗ್ಲಾಸ್ ನೀರು ಕುಡಿದು ಶಿಬಿರದಲ್ಲಿ ಕುಳಿತುಕೊಳ್ಳಲು ಯೋಗ ಮ್ಯಾಟ್ ಅಥವಾ ಜಮಾಖಾನದೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಘಟನಾ ಕಾರ್ಯದರ್ಶಿ ಜಿ.ಎಸ್.ಗುರುಮೂರ್ತಿ ಅವರ ಮೊಬೈಲ್ 9449145416, ಖಜಾಂಚಿ ನವೀನ್ 9901585905 ಗೆ ಸಂಪರ್ಕಿಸಬಹುದು.

**ಜಲ್ ಜೀವನ್ ಮಿಷನ್ ಯೋಜನೆ ಸಭೆಯಲ್ಲಿ ಸಂಸದ ಗೋವಿಂದ ಕಾರಜೋಳ ಹೇಳಿಕೆ**

# ಇನ್ನೊಂದು ವರ್ಷದೊಳಗಾಗಿ ಜಿಲ್ಲೆಯ ಎಲ್ಲಾ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು

» ಚಿತ್ರದುರ್ಗ




ಜಿಲ್ಲೆಯ ಎಲ್ಲಾ ಜನವಸತಿಗಳಿಗೆ ಇನ್ನೊಂದು ವರ್ಷದೊಳಗಾಗಿ ಪ್ರಧಾನಮಂತ್ರಿಯವರ ಬಹು ಮಹಾತ್ವಾಕಾಂಕ್ಷೆಯ ಯೋಜನೆ ಜಲ್ ಜೀವನ್ ಮಿಷನ್ ಅಡಿ ಶುದ್ಧ ಕುಡಿಯುವ ನೀರು ಒದಗಿಸಲಾಗುವುದು ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ಚಿತ್ರದುರ್ಗ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿ ಆಧಿಕಾರಿಗಳೊಂದಿಗೆ ಮಾತನಾಡಿದ ಅವರು, ಜಲ್ ಜೀವನ್ ಮಿಷನ್ ಯೋಜನೆ ಘೋಷಣೆಯಾದಾಗ ಈ ದೇಶದ ಸುಮಾರು 19.33 ಕುಟುಂಬಗಳ ಪೈಕಿ ಕೇವಲ 3.23 ಕೋಟಿ ಕುಟುಂಬಗಳು ಮಾತ್ರ ನಲ್ಲಿ ನೀರಿನ ಸಂಪರ್ಕ ಹೊಂದಿದ್ದವು, ಈಗಾಗಿ ಉಳಿದ 16.09 ಕೋಟಿ ಕುಟುಂಬಗಳಿಗೆ ನಲ್ಲಿ ಮೂಲಕ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವ ಹೊಣೆ ನಮ್ಮೆಲ್ಲರ ಮೇಲಿತ್ತು, ಇದರಲ್ಲಿ ಈಗಾಗಲೇ 15.16 ಕೋಟಿ ಕುಟುಂಬಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಸುಮಾರು 950 ಗ್ರಾಮಗಳು, 1685 ಜನವಸತಿಗಳಿಂದ ಅಂದಾಜು 19 ಲಕ್ಷ ಜನಸಂಖ್ಯೆಯನ್ನು ಚಿತ್ರದುರ್ಗ ಜಿಲ್ಲೆ ಹೊಂದಿದೆ, ಈ ಎಲ್ಲಾ ಜನವಸತಿಗಳಿಗೆ ಇನ್ನೊಂದು ವರ್ಷದೊಳಗಾಗಿ ಪ್ರಧಾನಮಂತ್ರಿಯವರ ಬಹು ಮಹಾತ್ವಾಕಾಂಕ್ಷೆಯ ಯೋಜನೆ ಜಲ್ ಜೀವನ್ ಮಿಷನ್ ಅಡಿ ಶುದ್ಧ ಕುಡಿಯುವ ನೀರು ಒದಗಿಸಲಾಗುವುದು ಎಂದು ಸಂಸದ ಗೋವಿಂದ ಕಾರಜೋಳ ಇಂದು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಲ್ ಜೀವನ್ ಮಿಷನ್ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಂದ ಮಾಹಿತಿ ಪಡೆದು ತಿಳಿಸಿದರು.

ಒಟ್ಟಾರೆಯಾಗಿ ಜಿಲ್ಲೆಯಲ್ಲಿ 2800 ಕೋಟಿ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಹಾಗೂ ರೂ.941 ಕೋಟಿ ವೆಚ್ಚದ ಜಲ್ ಜೀವನ್ ಮಿಷನ್ ಯೋಜನೆಯಡಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಜಲ್ ಜೀವನ್ ಮಿಷನ್ ಯೋಜನೆಯ ಕೆಲವು ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಪ್ರಸ್ತುತ ಕೊಳವೆಬಾವಿಗಳನ್ನು ನೀರಿನ ಮೂಲವಾಗಿ ಅಂದಾಜುಪಟ್ಟಿ ರಚಿಸಲಾಗಿದೆ ಎಂದು ಅಧಿಕಾರಿಗಳು ಸಂಸದರಿಗೆ ಮಾಹಿತಿ ನೀಡಿದರು, ಇದಕ್ಕೆ ಸಂಸದರು ಯಾವುದೇ ಕಾರಣಕ್ಕೂ ಕೊಳವೆಬಾವಿಗಳನ್ನು ನೀರಿನ ಮೂಲವನ್ನಾಗಿ ನೀವು ಆಯ್ಕೆ ಮಾಡಿಕೊಳ್ಳಬೇಡಿ, ಕೊಳವೆಬಾವಿಗಳು ಬೇಸಿಗೆಯಲ್ಲಿ ಬತ್ತಿ ಹೋಗುತ್ತವೆ, ಹೇಳಿ ಕೇಳಿ ಚಿತ್ರದುರ್ಗ ಬರಪೀಡಿತ ಹಾಗೂ ಅತಿ ಕಡಿಮೆ ಮಳೆ ಬೀಳುವ ಜಿಲ್ಲೆ, ಕೊಳವೆ ಬಾವಿಗಳು ಶಾಶ್ವತ ಪರಿಹಾರವಲ್ಲ, ಇದರ ಬದಲಾಗಿ ನೀವು ಮೇಲ್ಮೈ ನೀರಿನ ಮೂಲವನ್ನೇ ಆಶ್ರಯಿಸಿ, ಮೇಲ್ಮೈ ನೀರು ಮಾತ್ರ ಶಾಶ್ವತ ಪರಿಹಾರವಾಗಬಲ್ಲದು ಎಂದು ಕಿವಿಮಾತು ಹೇಳಿದರು.

ಇದಕ್ಕೆ ಉತ್ತರಿಸಿ ಅಧಿಕಾರಿಗಳು, ಈಗಾಗಲೇ ಪಾವಗಡ ತಾಲ್ಲೂಕು ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ತುಂಗ ಭದ್ರಾ ಜಲಾಶಯದ ಹಿನ್ನೀರಿನಿಂದ ಕುಡಿಯುವ ನೀರು ಸರಬರಾಜು ಮಾಡುವ ಕಾಮಗಾರಿ ಪ್ರಗತಿಯಲ್ಲಿದ್ದು, ಈ ಯೋಜನೆಯಿಂದ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿಯ 560 ಹಳ್ಳಿಗಳಿಗೆ ಈ ನೀರು ಸರಬರಾಜಾಗಲಿದೆ, ಹೊಳಲ್ಕೆರೆ ತಾಲ್ಲೂಕಿನ 215 ಹಳ್ಳಿಗಳಿಗೆ ವಾಣಿವಿಲಾಸ ಸಾಗರ ನೀರಿನ ಮೂಲದಿಂದ ನೀರು ಸರಬರಾಜಾಗುತ್ತದೆ, ಈಗಾಗಲೇ ಸಿರಿಗೆರೆ ಭರಮಸಾಗರ ಹಾಗೂ 45 ಹಳ್ಳಿಗಳಿಗೆ ಶಾಂತಿಸಾಗರ ನೀರಿನ ಮೂಲದಿಂದ ನೀರು ಸರಬರಾಜಾಗುತ್ತಿದೆ ಎಂದು ಮಾಹಿತಿ ನೀಡಿದರು.

ಭರಮಸಾಗರದ ಕಾಮಗಾರಿಯನ್ನು ಕಳೆದಮೂರು ತಿಂಗಳಿನಿಂದ ನಿಲ್ಲಿಸಲಾಗಿದೆ, ಪೈಪ್ ಅಳವಡಿಸಲಿಕ್ಕೆ ಗುಂಡಿಗಳನ್ನ ತಗೆದು ಬಿಟ್ಟಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದೆ, ಇದಕ್ಕೆ ಏನು ಕಾರಣ ಎಂದು ಸಂಸದರು ಪ್ರಶ್ನಿಸಿದರು, ಇದಕ್ಕೆ ಉತ್ತರಿಸಿದ ಕಾರ್ಯಪಾಲಕ ಅಭಿಯಂತರರು ಗುತ್ತಿಗೆದಾರರ ನಿರ್ಲಕ್ಷ್ಯತನದಿಂದ ಈ ರೀತಿ ಆಗಿದೆ, ಕೂಡಲೇ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ವಹಿಸಿ ಎರಡು ವರ್ಷವಾದರು ಕಾಮಗಾರಿ ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ, ಗುಣಮಟ್ಟದ ಕಾಮಗಾರಿ ನಡೆಯುತ್ತಿಲ್ಲ, ಗುಣಮಟ್ಟದ ಪೈಪುಗಳನ್ನು ಹಾಗೂ ನಲ್ಲಿಗಳನ್ನ ಅಳವಡಿಸುತ್ತಿಲ್ಲ ಈ ಬಗ್ಗೆ ಸಾಕಷ್ಟು ದೂರುಗಳು ಬಂದಿವೆ, ಪ್ರತಿಯೊಬ್ಬರಿಗೂ ಶುದ್ಧ ಕುಡಿಯುವ ನೀರು ಸರಬರಾಜಾಗಬೇಕು ಈ ನಿಟ್ಟಿನಲ್ಲಿ ಯಾವುದೇ ರಾಜಿ ಇಲ್ಲ. ಜನರಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಿದರೆ ಅನೇಕ ಖಾಯಿಲೆಗಳಿಂದ ಅವರನ್ನು ದೂರವಿಡಬಹುದು, ಬಹುತೇಕ ಖಾಯಿಲೆಗಳು ನೀರಿನಂದಲೇ ಬರುತ್ತವೆ ಎನ್ನುವ ವಿಷಯ ನಿಮಗೂ ತಿಳಿದೇ ಇದೆ ಎಂದು ಇಂಜಿನಿಯರ್‌ಗಳಿಗೆ ಸಂಸದರು ತಿಳಿ ಹೇಳಿದರು.

ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮುಖ್ಯ ಲೆಕ್ಕಾಧಿಕಾರಿಗಳಾದ ಮಧು ಡಿ.ಆರ್. ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಬಸವನಗೌಡ, ಜಿಲ್ಲಾ ಯೋಜನಾ ವ್ಯವಸ್ಥಾಪಕರಾದ ಮಂಜುನಾಥ್ ಎಸ್.ನಾಡರ್, ಎಲ್ಲಾ ತಾಲ್ಲೂಕುಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

**ಶೋಭಾಯಾತ್ರೆಯಲ್ಲಿ ರಾರಾಜಿಸಿದ ಕೇಸರಿ ಬಾವುಟಗಳು, ಡಿಜೆ ಸದ್ದಿಗೆ ಹೆಜ್ಜೆ ಹಾಕಿದ ಸಾವಿರಾರು ಯುವಕರು**

# ಅದ್ದೂರಿ ವಿರಾಟ್ ಹಿಂದೂ ಗಣಪತಿ ಶೋಭಾಯಾತ್ರೆ





» ಹೊಸದುರ್ಗ

ಪಟ್ಟಣದ ಅಂಬೇಡ್ಕರ್ ಸರ್ಕಲ್ ಸಮೀಪದಲ್ಲಿ ಪ್ರತಿಷ್ಠಾಪಿಸಲಾಗಿದ್ದ ವಿರಾಟ್ ಹಿಂದೂ ಮಹಾಸಾಗರ ಗಣಪತಿಯ 11 ನೇ ವರ್ಷದ ಬೃಹತ್ ಶೋಭಾಯಾತ್ರೆ ಗುರುವಾರ ಪಟ್ಟಣದ ಮುಖ್ಯ ರಸ್ತೆಗಳಲ್ಲಿ ವಿಜೃಂಭಣೆಯಿಂದ ಜರುಗಿತು. ವಿಶೇಷ ಅಲಂಕೃತ ವಾಹನದಲ್ಲಿ ಸ್ವಾಮಿಯನ್ನು ಕೂರಿಸಿ, ರಾಜಬೀದಿ ಉತ್ಸವ ನಡೆಸಿದ್ದು, ಈ ಬಾರಿಯ ವಿಶೇಷವಾಗಿತ್ತು.

ಶೋಭಾಯಾತ್ರೆ ಸಾಗುವ ಮುಖ್ಯ ರಸ್ತೆಗಳನ್ನು ಕೇಸರಿ ಬಣ್ಣದ ಬಟ್ಟೆಗಳು ಹಾಗೂ ಬಾವುಟಗಳಿಂದ ಸಿಂಗಾರ ಗೊಳಿಸಲಾಗಿತ್ತು. ರಾಜಕೀಯ ನಾಯಕರು, ಸಮಾಜ ಸೇವಕರು, ಗಣಪತಿ ಸೇವಾ ಸಮಿತಿಯ ಸದಸ್ಯರ ಫ್ಲೆಕ್ಸ್ ಗಳಂತೂ ರಸ್ತೆಯೂದ್ದಕ್ಕೂ ರಾರಾಜಿಸುತ್ತಿದ್ದವು. ಮಧ್ಯಾಹ್ನ 2 ಗಂಟೆ ಸುಮಾರಿಗೆ ಬೃಹತ್ ಶೋಭಾಯಾತ್ರೆಗೆ ಬೆಲಗೂರು ಮಾರುತಿ ಗುರುಪೀಠದ ಶ್ರೀ ಬಿಂಧು ಮಾಧವ ಶರ್ಮ ಸ್ವಾಮೀಜಿ ಚಾಲನೆ ನೀಡಿದರು. ಗಣಪತಿ ಮಂಟಪದಿಂದ ಹೊರಟ ಮೆರವಣಿಗೆ ಅಂಬೇಡ್ಕರ್ ಸರ್ಕಲ್, ಗಾಂಧಿ ಸರ್ಕಲ್, ಬಸವೇಶ್ವರ ಸರ್ಕಲ್, ಮದಕರಿ ಸರ್ಕಲ್, ವೀರಭದ್ರೇಶ್ವರ ಸ್ವಾಮಿ ದೇವಾಲಯದ ಮುಂಭಾಗದ ಮೂಲಕ ಮಠದ ಬಾವಿ ಹತ್ತಿರ ತಲುಪಿತು. ನಂತರ ಸ್ವಾಮಿಗೆ ಪೂಜೆ ಸಲ್ಲಿಸಿ, ವಿಸರ್ಜನೆ ಮಾಡಲಾಯಿತು.

**ಬಿಗಿ ಪೊಲೀಸ್ ಬಂದೋ ಬಸ್ತ್:** ಶೋಭಾಯಾತ್ರೆಯ ವಿಶೇಷವಾಗಿ ಒಬ್ಬರು ಅಡಿಷನಲ್ ಎಸ್ಪಿ, ಒಬ್ಬರು ಡಿವೈಎಸ್ಪಿ, 4 ಸಿಪಿಐ, 12 ಪಿಎ□□□, 250 ಪೊಲೀಸ್ ಸಿಬ್ಬಂದಿ, ಒಂದು ಕೆ ಎಸ್ ಆರ್ ಪಿ, 4 ವಿಶೇಷ ಪೊಲೀಸ್ ಪಡೆಗಳನ್ನು ನಿಯೋಜನೆ ಮಾಡಲಾಗಿತ್ತು. ಮೆರವಣಿಗೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಬಿಗಿ ಬಂದೋ ಬಸ್ತ್ ಮಾಡಲಾಗಿತ್ತು.

**ಕುಣಿದು ಕುಪ್ಪಳಿಸಿದ ಯುವಕರು:** ಮೆರವಣಿಗೆಯೂದ್ದಕ್ಕೂ ಸಾವಿರಾರು ಯುವಕರು ಮತ್ತು ಯುವತಿಯರು ಡಿಜೆ ಸದ್ದಿಗೆ ಕುಣಿದು ಕುಪ್ಪಳಿಸಿದರು. ಭಗವದ್ವಜ, ಶ್ರೀರಾಮ, ಹನುಮಂತ, ಶಿವಾಜಿ ಇನ್ನಿತರ ಮಹಾನ್ ನಾಯಕರ ಬಾವುಟಗಳನ್ನು ಹಿಡಿದಿದ್ದ ಯುವಕರು ಅತ್ತಿಂದಿತ್ತ ತಿರುಗಿಸುತ್ತ ಕುಣಿದರು. ಬಹುತೇಕರು ಕೇಸರಿ ಶಾಲು, ರುಮಾಲು ಧರಿಸಿ ಗಮನ ಸೆಳೆದರು. ಒಬ್ಬರನ್ನೊಬ್ಬರು ಕೈಗಳನ್ನು ಹಿಡಿಯುತ್ತಾ 'ಕುಚಿಕು ಕುಚಿಕು' ಹಾಗೂ ಇನ್ನಿತರ ಡಿಜೆ ಹಾಡುಗಳಿಗೆ ಒಂದಾಗಿ ಹೆಜ್ಜೆ ಹಾಕಿ ಸಂಭ್ರಮಿಸಿದರು.

**ಮೆರವಣಿಗೆಯುದ್ದಕ್ಕೂ ತಿಂಡಿ, ನೀರಿನ ವ್ಯವಸ್ಥೆ:** ಮೆರವಣಿಗೆ ಸಾಗಿ ಬಂದ ದಾರಿಯುದ್ದಕ್ಕೂ ವಿವಿಧ ಸಂಘ–ಸಂಸ್ಥೆ, ರೇಷನ್ ಅಂಗಡಿಯವರು, ಹೋಟೆಲ್ ಮಾಲೀಕರು, ಬಸ್ ಏಜೆಂಟ್ ಸಂಘ ಹಲವರು ಪಲಾವ್, ಮೊಸರನ್ನ, ಚಿತ್ರಾನ್ನ ಇನ್ನಿತರ ತಿಂಡಿಗಳನ್ನು ನೀಡಿದರು. ನೀರು ಮತ್ತು ಮಜ್ಜಿಗೆಯನ್ನು ದಾರಿ ಉದ್ದಕ್ಕೂ ವಿತರಿಸಲಾಯಿತು.

**ರಾರಾಜಿಸಿದ ನಟರ ಬಾವುಟಗಳು:** ಸುದೀಪ್, ದರ್ಶನ್, ಪುನೀತ್ ರಾಜಕುಮಾರ್, ವಿಷ್ಣುವರ್ಧನ್ ಹಾಗೂ ಇನ್ನಿತರ ನಟರ ಭಾವಚಿತ್ರವುಳ್ಳ ಬಾವುಟಗಳು ಮೆರವಣಿಗೆಯುದ್ದಕ್ಕೂ ರಾರಾಜಿಸಿ, ಗಮನ ಸೆಳೆದವು.

## ಫಾಸ್ಟ್ ನ್ಯೂಸ್

### ಮೇಯರ್, ಉಪಮೇಯರ್ ಚುನಾವಣೆ ಸಭೆ

» ದಾವಣಗೆರೆ

ಮಹಾನಗರಪಾಲಿಕೆ ಮೇಯರ್ ಮತ್ತು ಉಪ ಮೇಯರ್ ಸ್ಥಾನಗಳಿಗೆ ಚುನಾವಣೆ ನಡೆಸಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾನ್ ಅವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 27 ರಂದು ಮಧ್ಯಾಹ್ನ 3 ಗಂಟೆಗೆ ಮಹಾನಗರಪಾಲಿಕೆಯ ಸಭಾಂಗಣದಲ್ಲಿ ಸಭೆಯನ್ನು ಆಯೋಜಿಸಲಾಗಿದೆ.

### ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳಾದ ಪಿ.ಯು.ಸಿ. ಮತ್ತು ಸಮಾನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಪದವಿ ಕೋರ್ಸುಗಳಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ, ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ಮತ್ತು ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಅಕ್ಟೋಬರ್ 15 ರ ವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿ ಯೋಜನೆಯಡಿ ಅಸಾಧಾರಣ ಪ್ರತಿಭೆಯುಳ್ಳ ಮಕ್ಕಳ ಜಿಲ್ಲಾ ಮಟ್ಟದ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸುವ ದಿನಾಂಕವನ್ನು ಅಕ್ಟೋಬರ್ 5 ರವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಉದ್ಯೋಗ ಮೇಳ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಇವರ ವತಿಯಿಂದ ಸೆ.21 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಠಡಿ ಸಂಖ್ಯೆ-51, ಜಿಲ್ಲಾಧಿಕಾರಿಗಳ ಕಚೇರಿ, ದಾವಣಗೆರೆ ಇಲ್ಲಿ ಉದ್ಯೋಗಮೇಳ ಆಯೋಜಿಸಲಾಗಿದೆ.ಈ ಉದ್ಯೋಗಮೇಳದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮ, ಎಂಜಿನಿಯರ್(ಮೆಕಾನಿಕಲ್, ಎಲೆಕ್ಟ್ರಿಕಲ್&ಎಲೆಕ್ಟ್ರಾನಿಕ್ಸ್) ಎಎನ್‌ಎಮ್, ಜಿಎನ್‌ಎಮ್, ಬಿ.ಎಸ್ಸಿ ನರ್ಸಿಂಗ್ ಹಾಗೂ ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಆಸಕ್ತರು ಕನಿಷ್ಠ 8 ಸೆಟ್ ಬಯೋಡಾಟಾ ಮತ್ತು ಆಧಾರ್ ನಂಬರ್ ನೊಂದಿಗೆ ಈ ಮೇಳದಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗೆ: 7483808321, 08192-259446 ಸಂಪರ್ಕಿಸಿ.

### ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

» ದಾವಣಗೆರೆ

ಸೆಪ್ಟೆಂಬರ್ 21 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಎ.ವಿ.ಕೆ ಕಮಲಮ್ಮ ಕಾಲೇಜು ಸಭಾಂಗಣದಲ್ಲಿ ಆತ್ಮಹತ್ಯೆಯ ನಿರೂಪಣೆಯನ್ನು ಬದಲಾಯಿಸೋಣ ಎಂಬ ಘೋಷಣೆಯೊಂದಿಗೆ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆಯನ್ನು ಏರ್ಪಡಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಮನೋವೈದ್ಯಕೀಯ ವಿಭಾಗ, ಜಿಲ್ಲಾ ಚಿಗಟೇರಿ ಆಸ್ಪತ್ರೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಎ.ವಿ.ಕಮಲಮ್ಮ ಮಹಿಳಾ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ ವಿಭಾಗ ಸಹಯೋಗದಲ್ಲಿ ಕಾರ್ಯಕ್ರಮ ಏರ್ಪಡಿಸಲಾಗಿದ್ದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ, ಅವರು ಕಾರ್ಯಕ್ರಮ ಉದ್ಘಾಟಿಸುವರು. ಎ.ವಿ.ಕೆ ಮಹಿಳಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಕಮಲಾ ಸೊಪ್ಪಿನ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ.ಎಸ್, ದಾವಣಗೆರೆ ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆಯ ಪ್ರಾಧ್ಯಾಪಕರು ಮತ್ತು ಸಂಯೋಜನಾಧಿಕಾರಿ ಡಾ.ಅಶೋಕಕುಮಾರ್ ಪಾಳೇದ, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಮಂಜುನಾಥ ಎಲ್ ಪಾಟೀಲ್ ಪಾಲ್ಗೊಳುವರು. ಚಿಗಟೇರಿ ಜಿಲ್ಲಾ ಆಸ್ಪತ್ರೆಯ ಮನೋವೈದ್ಯಕೀಯ ವಿಭಾಗದ ಜಿಲ್ಲಾ ಮನೋವೈದ್ಯರಾದ ಡಾ.ಮರುಳಸಿದ್ದಪ್ಪ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು. ಎ.ವಿ. ಕಮಲಮ್ಮ ಮಹಿಳಾ ಕಾಲೇಜಿನ ಐ.ಕ್ಯೂ.ಎ.ಸಿ ಸಂಯೋಜಕರಾದ ಪ್ರೊ. ಆರ್.ಆರ್ ಶಿವಕುಮಾರ, ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿ ಉಷಾ.ಎಂ.ಆರ್, ಡಾ.ವಿಶ್ವನಾಥ.ಪಿ ಉಪಸ್ಥಿತರಿರುವರು.

# 21ನೇ ಶತಮಾನದ ಭಾರತ ಆರ್ಥಿಕ ಉನ್ನತಿಯಲ್ಲಿ ಎಂ.ಎಸ್.ಎಂ.ಇ. ಪಾತ್ರ ಬಹಳ ಮುಖ್ಯ : ಸಂಸದ

» ಚಿತ್ರದುರ್ಗ

21 ನೇ ಶತಮಾನದ ಭಾರತವು ಯಾವುದೇ ಎತ್ತರವನ್ನು ಸಾಧಿಸುವುದಾದರೂ ಅದು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಯಶಸ್ಸಿನ ಮೇಲೆ ಅವಲಂಭಿತವಾಗಿರುತ್ತದೆ, ನಮ್ಮ ದೇಶದ ರಫ್ತು ಪ್ರಮಾಣ ಹೆಚ್ಚಾಗಲು ಮತ್ತು ಭಾರತದ ಉತ್ಪನ್ನಗಳು ಹೊಸ ಮಾರುಕಟ್ಟೆಗಳನ್ನು ತಲುಪಲು ಭಾರತದ ಎಂ.ಎಸ್.ಎಂ.ಇ. ವಲಯ ಬಲಿಷ್ಠವಾಗಬೇಕಾಗಿರುವುದು ಅತ್ಯಂತ ಅವಶ್ಯವಾಗಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ಚಿತ್ರದುರ್ಗದ ಜೈಲ್‌ರಸ್ತೆಯಲ್ಲಿರುವ ಕೆ.ಐ.ಎ.ಡಿ.ಬಿ ಕೈಗಾರಿಕಾ ವಲಯದಲ್ಲಿರುವ ಕೇಂದ್ರ ಸರ್ಕಾರದ ಎಂ.ಎಸ್.ಎಂ.ಇ ಇಲಾಖೆಯ ಖಾದಿ ಮತ್ತು ಗ್ರಾಮೋದ್ಯೋಗ ಇಲಾಖೆಯಿಂದ ನಡೆಯುತ್ತಿರುವ ಕೇಂದ್ರೀಯ ಹಂಜಿ ಕಾರ್ಯಾಗಾರಕ್ಕೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಗಳನ್ನು ಪ್ರೋತ್ಸಾಹಿಸಿ ಮಾತನಾಡಿದ ಅವರು. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು ಭಾರತದ ಬೆಳವಣಿಗೆಯ ಪ್ರಯಾಣದ ಬಹುದೊಡ್ಡ ಆಧಾರಸ್ಥಂಭವಾಗಿದೆ. ಈ ವಲಯವು ಭಾರತದ ಆರ್ಥಿಕತೆಯ ಸುಮಾರು ಮೂರನೇ ಒಂದು ಭಾಗವನ್ನು ಹೊಂದಿದೆ. ಈ ವಲಯವನ್ನು ಬಲಪಡಿಸುವುದು ಇಡೀ ಸಮಾಜವನ್ನು ಬಲಪಡಿಸಿದಂತಾಗುತ್ತದೆ, ಈ ಕಾರಣದಿಂದಾಗಿಯೇ ಮೋದಿಜಿ ನೇತೃತ್ವದ ನಮ್ಮ ಸರ್ಕಾರದ ಅತ್ಯುನ್ನತ



ಆದ್ಯತೆಗಳಲ್ಲಿ ಒಂದಾಗಿ ಈ ವಲಯವನ್ನು ನೋಡುತ್ತಿದೆ ಎಂದರು.

ಈ ವಲಯವನ್ನು ಬಲಪಡಿಸಲು ಕಳೆದ 10 ವರ್ಷಗಳಲ್ಲಿ ಕೇಂದ್ರ ಸರ್ಕಾರ ಬಜೆಟ್‌ನಲ್ಲಿ ಅಗ್ರಪಾಲನ್ನು ಒದಗಿಸುತ್ತಿದೆ. ಸುಮಾರು 11 ಕೋಟಿಗೂ ಹೆಚ್ಚು ಜನರು ಈ ವಲಯದೊಂದಿಗೆ ಸಂಪರ್ಕ ಹೊಂದಿದ್ದಾರೆ. ಕೋವಿಡ್ ಸಂಕಷ್ಟದ ಸಮಯದಲ್ಲಿ ಈ ವಲಯವನ್ನು ಉತ್ತೇಜಿಸುವ ಸಲುವಾಗಿ ಅನೇಕ ರಿಯಾಯಿತಿ ಯೋಜನೆಗಳನ್ನು ಕೇಂದ್ರ ಸರ್ಕಾರ ಆತ್ಮನಿರ್ಭರ ಯೋಜನೆಯ ಮೂಲಕ ನೀಡಿದ್ದರ ಪರಿಣಾಮವಾಗಿ ವಲಯ ಈಗ ಚೇತರಿಸಿಕೊಂಡಿದೆ ಎಂದರು. ಇಡೀ ದಕ್ಷಿಣ ಭಾರತದಲ್ಲಿ ಕರ್ನಾಟಕದ ಚಿತ್ರದುರ್ಗ ಮತ್ತು ಕೇರಳದಲ್ಲಿ ಮಾತ್ರ ಕೇಂದ್ರೀಯ ಹಂಜಿ ಕಾರ್ಯಾಗಾರಗಳು ಕಾರ್ಯನಿರ್ವಹಿಸುತ್ತಿವೆ. ಚಿತ್ರದುರ್ಗದ ಹಂಜಿ ಕಾರ್ಯಾಗಾರದಲ್ಲಿ ಸುಮಾರು 90 ಕ್ಕೂ ಹೆಚ್ಚು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ, ಸುಮಾರು 5 ಎಕರೆ ಪ್ರದೇಶದಲ್ಲಿ 1995 ರಲ್ಲಿ ಪ್ರಾರಂಭವಾದ ಈ ಘಟಕ ಪ್ರಸ್ತುತ ಪ್ರತಿ ವರ್ಷ 18-20 ಕೋಟಿ ವಹಿವಾಟು ಹೊಂದಿದೆ ಎಂದು ಪ್ರೊಡಕ್ಷನ್ ಉಸ್ತುವಾರಿ ರಮೇಶ್ ಸಂಸದರಿಗೆ ಮಾಹಿತಿ ನೀಡಿದರು. ಇಲ್ಲಿ ತಯಾರಾಗುವ ಖಾದಿ ಕಚ್ಚಾವಸ್ತು ಕರ್ನಾಟಕ, ಆಂಧ್ರ, ತಮಿಳುನಾಡು ಸೇರಿದಂತೆ ಅನೇಕ ರಾಜ್ಯಗಳಿಗೆ ವಿತರಣೆಯಾಗುತ್ತದೆ. ನಮ್ಮ ದೇಶದ ತ್ರಿವರ್ಣ ಧ್ವಜ ತಯಾರಾಗುವ ಗರಗ ಗ್ರಾಮಕ್ಕೆ ಹಾಗೂ ಹುಬ್ಬಳ್ಳಿಯ ಬೆಂಗೇರಿಗೂ ಸಹ ಇಲ್ಲಿಂದಲೇ ಖಾದಿ ನೂಲು ಸರಬರಾಜಾಗುತ್ತದೆ ಎಂದರು.

ಇಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ನಿವೃತ್ತಿ ವೇತನ ಇಲ್ಲ, ಇನ್ನುಳಿದಂತೆಸರ್ಕಾರದಎಲ್ಲಾಸೌಲಭ್ಯಗಳು ಸಿಗುತ್ತಿವೆ ಎಂದು ಸಿಬ್ಬಂದಿಗಳು ಸಂಸದರಿಗೆ ವಿವರಿಸಿದರು. ಇನ್ನುಳಿದಂತೆ ಇಲ್ಲಿ ಕೆಲಸ ಮಾಡುವ ನಾವು ರಾತ್ರಿ ಪಾಳದಲ್ಲಿ ಕೂಡ ಕೆಲಸ ಮಾಡುತ್ತಿದ್ದೇವೆ. ನಮಗೆ ಸಿಗಬೇಕಾದ ಸೌಲಭ್ಯಗಳು ಸರಿಯಾದ ರೀತಿಯಲ್ಲಿ ದೊರೆತದ್ದೇ ಆದರೆ ಇನ್ನೂ ಹುಮ್ಮಸ್ಸಿನಿಂದ ಕೆಲಸ ಮಾಡಲು ನಾವು ಸಿದ್ದರಿದ್ದೇವೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದರು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆಯವರನ್ನು ಒಂದು ಬಾರಿ ಈ ಘಟಕಕ್ಕೆ ಕರೆತರುತ್ತೇನೆ, ಈ ಘಟಕವನ್ನು ಇನ್ನಷ್ಟು ಮೇಲ್ದರ್ಜೇಗೇರಿಸಲು ಅಗತ್ಯವಾದ ಕ್ರಮವನ್ನು ತೆಗೆದುಕೊಳ್ಳಲು ನಾನು ಅವರ ಮನವೊಲಿಸುತ್ತೇನ ಎಂದರು. ಇದೇ ಸಮಯದಲ್ಲಿ ಸಿಬ್ಬಂದಿಗಳ ಬೇಡಿಕೆಗಳೇನಾದರು ಇದ್ದಲ್ಲಿ ಅವರ ಗಮನಕ್ಕೆ ತರೋಣ ಎಂದರು.

ಸಂಸದರ ಜೊತೆ ಕೇಂದ್ರೀಯಾ ಹಂಜಿ ಕಾರ್ಯಾಗಾರದ ಪ್ರೊಡಕ್ಷನ್ ಉಸ್ತುವಾರಿ ರಮೇಶ್, ಹಂಜಿ ಕಾರ್ಯಾಗಾರದ ಸಹಾಯಕ ನಿರ್ದೇಶಕರು, ಹಾಗೂ ಇತರೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅಣಕು ಯುವ ಸಂಸತ್ ಕಾರ್ಯಕ್ರಮ ಪ್ರಶಂಸನೀಯ

» ಚಿತ್ರದುರ್ಗ

ಪದವಿ ಪೂರ್ವ ಶಿಕ್ಷಣ ಇಲಾಖೆ ಮಕ್ಕಳಿಗಾಗಿ ಆಯೋಜಿಸಿರುವ ಕಾರ್ಯಕ್ರಮಗಳಲ್ಲಿ ಅಣಕು ಯುವ ಸಂಸತ್ ಕಾರ್ಯಕ್ರಮ ತುಂಬಾ ಪ್ರಶಂಸನೀಯ ಹಾಗೂ ಅರ್ಥಪೂರ್ಣವಾಗಿದೆ ಎಂದು ಉಪನ್ಯಾಸಕರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಆರ್.ಮಲ್ಲೇಶ್ ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಚಿತ್ರದುರ್ಗ & ಡಾನ್ ಬೋಸ್ಕ್ ಪದವಿ ಪೂರ್ವ ಕಾಲೇಜಿನಲ್ಲಿ ಅಯೋಜಿಸಲಾಗಿದ್ದ "ಜಿಲ್ಲಾ ಮಟ್ಟದ ಯುವ ಸಂಸತ್ತು ಸ್ಪರ್ಧೆ ~2024ರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮಕ್ಕಳಿಗಾಗಿ ಆಯೋಜಿಸಿರುವ ಕಾರ್ಯಕ್ರಮಗಳಲ್ಲಿ ಅಣಕು ಯುವ ಸಂಸತ್ ಕಾರ್ಯಕ್ರಮ ತುಂಬಾ ಪ್ರಶಂಸನೀಯ ಹಾಗೂ ಅರ್ಥಪೂರ್ಣವಾಗಿದೆ. ಯಾಕೆಂದರೆ "ಇಂದಿನ ವಿದ್ಯಾರ್ಥಿಗಳು ಮುಂದಿನ ಪ್ರಜೆಗಳು" ಆ ಪ್ರಜೆಗಳೇ ಮುಂದಿನ ರಾಜಕರಣಿಗಳು ಆಗಬಹುದು. ದೇಶದ ಅಭಿವೃದ್ಧಿ ರಾಜಕಾರಣಿಗಳ ಇಚ್ಛಾಶಕ್ತಿಯನ್ನು ಅವಲಂಬಿಸಿದೆ.

ಈ ಹಿನ್ನಲೆಯಲ್ಲಿ ಸಂಸತ್ ಪ್ರವೇಶಿಸುವ ನಮ್ಮ ಪ್ರತಿನಿಧಿಗಳು ಪ್ರಜ್ಞಾವಂತರಾಗಿದ್ದರೆ ದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ. ಇಂತಹ ಪ್ರಜ್ಞಾವಂತ ರಾಜಕರಣಿ ಗಳನ್ನು ರೂಪಿಸಲು ಈ ರೀತಿಯ ಕಾರ್ಯಕ್ರಮಗಳು ಸ್ಪೂರ್ತಿದಾಯಕ ಎಂದು ಬಿ.ಆರ್.ಮಲ್ಲೇಶ್ ತಿಳಿಸಿದರು. ಕಾರ್ಯಕ್ರಮ ಉದ್ಘಾಟನೆಯನ್ನು ನೆರವೇರಿಸಿದ ಪ್ರಾಂಶುಪಾಲರಾದ ನರಸಿಂಹಮೂರ್ತಿ ಯವರು



ಮಾತನಾಡುತ್ತಾ ಪ್ರಜಾಪ್ರಭುತ್ವ ಬೇರುಗಳು ಗಟ್ಟಿಯಾಗಲು ಈ ರೀತಿಯ ಕಾರ್ಯಕ್ರಮಗಳು ಸಹಕಾರಿ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾನ್ ಬೋಸ್ಕ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಫಾಧರ್ ಅನುಪ್ ಥಾಮಸ್ ವಹಿಸಿದ್ದರುಕಾರ್ಯಕ್ರಮದಲ್ಲಿ ಪ್ರಾಂಶುಪಾಲರ ಸಂಘದ ಅಧ್ಯಕ್ಷರಾದ ದೇವೇಂದ್ರಪ್ಪ ಎಸ್. ಪ್ರಾಂಶುಪಾಲರಾದ ಲೋಕೇಶ್, ದೇವರಾಜ್, ಉಪನ್ಯಾಸಕರಾದ ಕೆ.ತಿಪ್ಪೇಸ್ವಾಮಿ ಭಾಗವಹಿಸಿದ್ದರು ವಿದ್ಯಾರ್ಥಿನಿ ಕುಮಾರಿ ಸುಷ್ಮಿತ ಜೆ. ಪ್ರಾರ್ಥಿಸಿದರೆ, ಬುಡೇನ್ ಸಾಬ್ ಸ್ವಾಗತಿಸಿದರೆ, ರಾಜ್ಯಶಾಸ್ತ್ರ ವೇದಿಕೆಯ ಅಧ್ಯಕ್ಷರಾದ ಡಾ.ಜೆ.ಮೋಹನ್ ಪ್ರಾಸ್ತವಿಕವಾಗಿ ಮಾತನಾಡಿದರು. ಕಾರ್ಯಕ್ರಮ ನಿರೂಪಿಸಿ ವಂದನಾರ್ಪಣೆಯನ್ನು ಉಪನ್ಯಾಸಕರು ಹೊಳಲ್ಕೆರೆ ತಾಲ್ಲೂಕು ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಆರ್.ಚಂದ್ರಶೇಖರ್ ನೇರವೇರಿಸಿದರು. ಕಾರ್ಯಕ್ರಮದಲ್ಲಿ ವಿವಿಧ ತಾಲ್ಲೂಕಿನ ವಿವಿಧ ಕಾಲೇಜುಗಳಿಂದ ಪ್ರಾಂಶುಪಾಲರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಜಿಲ್ಲಾ ಮಟ್ಟದ ಯುವ ಸಂಸತ್ತು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಹಿರಿಯೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜ್‌ನ ಪ್ರಿಯಾ ಜೆ, ದ್ವಿತಿಯ ಸ್ಥಾನವನ್ನು ಹೊಳಲ್ಕೆರೆ ತಾಲ್ಲೂಕು ಉಪ್ಪರಿಗೇನಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆಯಿಷಾ ತೃತೀಯ ಸ್ಥಾನವನ್ನು ಚಿತ್ರದುರ್ಗದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಐಶ್ವರ್ಯ ಬಿ ವಿಜೇತರಾಗಿದ್ದಾರೆ.

## ಓದಿನಲ್ಲಿ ಶ್ರದ್ದೆ, ಕೆಲಸದಲ್ಲಿ ಸಮಗ್ರತೆ ಅಳವಡಿಸಲು ಕರೆ



» ದಾವಣಗೆರೆ

ಜೈನ್ ಇಂಜಿನಿಯರಿಂಗ್ ಕಾಲೇಜಿನ ಇಂಡಕ್ಷನ್ ಕಾರ್ಯಕ್ರಮ ಬುಧವಾರ ಅಯೋಜಿಸಲಾಗಿತ್ತು. ಕಾರ್ಯಕ್ರಮ ಉದ್ಘಾಟಿಸಿದ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಡಾ.ಟಿ.ಎನ್.ಶ್ರೀನಿವಾಸ್ ಮಾತನಾಡಿ, ಮೊದಲ ಸೆಮಿಸ್ಟರ್ ವಿದ್ಯಾರ್ಥಿಗಳಿಗೆಮೂರು ಗುಣಗಳನ್ನು ಅಳವಡಿಸಿಕೊಳ್ಳಬೇಕು. ಮಾರ್ಗದರ್ಶಕರಿಲ್ಲದೆ ಕೆಲಸದ ಸಾಮರ್ಥ್ಯವನ್ನು ರೂಡಿಸಿಕೊಳ್ಳಬೇಕು, ಓದಿನಲ್ಲಿ ಶ್ರದ್ದೆ ಹಾಗೂ ಕೆಲಸದಲ್ಲಿ ಸಮಗ್ರತೆಯನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು. ಪ್ರಾಂಶುಪಾಲ ಡಾ.ಡಿ.ಬಿ.ಗಣೇಶ್ ಅಧ್ಯಕ್ಷತೆ ವಹಿಸಿದ್ದರು. ಕಿಯೋನಿಕ್ಸ್ ನಿರ್ದೇಶಕ ಕೆ.ಎನ್.ಪ್ರವೀಣ್, ಜೆಐಟಿಯ ಸಲಹೆಗಾರ ಡಾ.ಮಂಜಪ್ಪ ಸಾರಥಿ, ಡೀನ್ ಅಕಾಡೆಮಿಕ್ ಡಾ.ಎನ್. ಮಧುಕೇಶ್ವರ, ಡಾ.ಜಿ.ನಟರಾಜ್ ಇತರರು ಇದ್ದರು.

### ದಸಾರ ಕ್ರೀಡಾ ಕೂಟ

**ದಾವಣಗೆರೆ:** ಪ್ರಸಕ್ತ ಸಾಲಿನ ದಾವಣಗೆರೆ ಜಿಲ್ಲೆಯ 6 ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಸ್ಪರ್ಧೆಗಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುವುದು. ಸೆ.23 ರಂದು ತಾಲ್ಲೂಕು ಕ್ರೀಡಾಂಗಣ, ಹೊನ್ನಾಳಿ ತಾಲ್ಲೂಕು ಕ್ರೀಡಾಂಗಣ, ಹರಿಹರ, ತಾಲ್ಲೂಕು ಕ್ರೀಡಾಂಗಣ, ಸೆ.24 ರಂದು ಚನ್ನಗಿರಿ ತಾಲ್ಲೂಕು ಕ್ರೀಡಾಂಗಣ, ನ್ಯಾಮತಿ.ತಾ. ಹೊನ್ನಾಳಿ, ತಾಲ್ಲೂಕು ಕ್ರೀಡಾಂಗಣ, ಜಗಳ್ರರು, ಸೆ.25 ರಂದು ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ತಿಳಿಸಲಾಗಿದೆ.

### ಕಾರ್ಮಿಕರ ದಿನಾಚರಣೆ

**ದಾವಣಗೆರೆ:** ಮಹಾನಗರ ಪಾಲಿಕೆ ವತಿಯಿಂದ ಸೆ.23 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಎಂ.ಸಿ.ಸಿ. ಬಿ ಬ್ಲಾಕ್‌ನಲ್ಲಿರುವ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಪೌರಕಾರ್ಮಿಕರ ದಿನಾಚರಣೆ ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಷೇರುದಾರರ ಸಹಕಾರದಿಂದ ಇಲಾಹಿ ಸೊಸೈಟಿ ಸುರಕ್ಷಿತ


» ಚಿತ್ರದುರ್ಗ

ಸದಸ್ಯರುಗಳು ಹಾಗೂ ಷೇರುದಾರರ ಸಹಕಾರದಿಂದ ಸೊಸೈಟಿ ಸುರಕ್ಷಿತವಾಗಿದೆ ಎಂದು ಇಲಾಹಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಅಧ್ಯಕ್ಷ ಮಹಮದ್ ನಿಜಾಮುದ್ದಿನ್ ಹರ್ಷ ವ್ಯಕ್ತಪಡಿಸಿದರು.

ಅಗಸನಕಲ್ಲು ಟಿ.ಎಂ. ಕೆ.ಕಾಂಪೌಂಡ್‌ನಲ್ಲಿರುವ ಅಹಮದ್ ಪ್ಯಾಲೇಸ್‌ನಲ್ಲಿ ಗುರುವಾರ ನಡೆದ ಇಲಾಹಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯ 2023-24 ನೇ ಸಾಲಿನ 60 ನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಷೇರು ಪಡೆದುಕೊಳ್ಳಲು ಆಗದಂತ ಕಡು ಬಡವರಿದ್ದಾರೆ. ಅಂತಹವರಿಂದ ಕೇವಲು ನೂರು ರೂ. ಹಾಗೂ ಶುಲ್ಕ ಐವತ್ತು ರೂ. ಗಳನ್ನು ಸಂಗ್ರಹಿಸಿ ಒಂದು ವರ್ಷಕ್ಕೆ ಹತ್ತು ಸಾವಿರ ರೂ.ಗಳ ಸಾಲವನ್ನು ಕಡಿಮೆ ಬಡ್ಡಿ ದರದಲ್ಲಿ ನೀಡಿದ್ದೇವೆ. ಎಫ್.ಡಿ. ಎಸ್.ಬಿ. ಪಿಗ್ಮಿ ಖಾತೆ ತೆರೆದು ನಮ್ಮ ಸೊಸೈಟಿಯಲ್ಲಿ ವ್ಯವಹರಿಸಿ ರಾಜ್ಯದಲ್ಲಿಯೇ ನಮ್ಮ ಸೊಸೈಟಿ ಮೊದಲ ಸ್ಥಾನದಲ್ಲಿರುವುದು ಹೆಗ್ಗಳಿಕೆ ಎಂದು ಹೇಳಿದರು.

ಸದಸ್ಯರುಗಳಿಗೆ ಶೇ.25 ರಷ್ಟು ಡಿವಿಡೆಂಟ್




ನೀಡಲಾಗುತ್ತಿದೆ. ಸಾಲ ವಸೂಲಾತಿ ಶೇ.78 ರಷ್ಟಿದೆ. ಮುಂದಿನ ದಿನಗಳಲ್ಲಿ ಸಾಲ ವಸೂಲಾತಿ ಪ್ರಮಾಣವನ್ನು ಶೇ.95 ಕ್ಕೆ ತರುವಲ್ಲಿ ಪ್ರಯತ್ನ ಮಾಡಲಾಗುವುದು. ಇದಕ್ಕೆ ಸಾಲ ತೆಗೆದುಕೊಂಡವರಿಗಿಂತ ಜಾಮೀನುದಾರರ ಜವಾಬ್ದಾರಿ ತುಂಬಾ ಮುಖ್ಯ. ಹದಿನಾಲ್ಕು ಲಕ್ಷದ ನಾಲ್ಕು ಸಾವಿರದ 163 ರೂ ಷೇರು ಬಂಡವಾಳವಿದ್ದು, 1400 ಸದಸ್ಯರುಗಳಿದ್ದಾರೆ. ಐದು ಕೋಟಿ ಹದಿನೈದು ಲಕ್ಷದ 88 ಸಾವಿರದ 342 ರೂ. ಗಳ ಸಾಲ ಸದಸ್ಯರುಗಳಿಂದ ಬರಬೇಕಿದ್ದು, ಅಂತ್ಯಕ್ಕೆ ಆರು ಕೋಟಿ ನಾಲ್ಕು ಲಕ್ಷದ 87 ಸಾವಿರದ 793 ರೂ. ಬಾಕಿಯಿದ್ದು, ಈ ಪೈಕಿ ಏಳು ಲಕ್ಷ 83 ಸಾವಿರದ 913 ಸುಸ್ತಿಯಾಗಿರುತ್ತದೆ. ಸಾಲ ಪಡೆದು ಸಕಾಲಕ್ಕೆ ಪಾವತಿಸದವರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುವುದೆಂದು ಸೂಚಿಸಿದರು.

ಸಂಘವು ನೀಡಿದ ಸಾಲಗಳ ಮೇಲೆ ಮಾಸಿಕ ಬಡ್ಡಿಯನ್ನು ಆಕರಣೆ ಮಾಡುತ್ತಿರುವುದರಿಂದ ಸಾಲ ಪಡೆದವರು ತಮ್ಮ ಮಾಸಿಕ ಕಂತು ಹಾಗೂ ಬಡ್ಡಿಯನ್ನು ಕಾಲ ಕಾಲಕ್ಕೆ ಪಾವತಿಸಿ ಶೇ. 2 ರಷ್ಟು ರಿಯಾಯಿತಿ ಲಾಭವನ್ನು ಪಡೆದುಕೊಂಡು ಸೊಸೈಟಿ ಇನ್ನು ಹೆಚ್ಚಿನ ಅಭಿವೃದ್ಧಿಯಾಗಲು ಸಹಕರಿಸಬೇಕೆಂದು ಮಹಮದ್ ನಿಜಾಮುದ್ದಿನ್ ಮನವಿ ಮಾಡಿದರು. ಪ್ರತಿಯೊಬ್ಬ ಜಾಮೀನುದಾರನ ಮೇಲೆ ಸಾಲಗಾರನಷ್ಟೆ ಜವಾಬ್ದಾರಿಯಿರುತ್ತದೆ. ಜಾಮೀನು ಆಗುವುದಕ್ಕಿಂತ ಮುಂಚೆಯೆ ಸಾಲಗಾರನ ಆರ್ಥಿಕ ಸ್ಥಿತಿಗತಿ ಹಾಗೂ ಸಾಲ ಮರುಪಾವತಿಸುವ ಶಕ್ತಿ ಇದೆಯೋ ಇಲ್ಲವೋ ಎನ್ನವುದನ್ನು ಖಾತರಿಪಡಿಸಿಕೊಳ್ಳಬೇಕೆಂದು ಹೇಳಿದರು.

ಇಲಾಹಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಉಪಾಧ್ಯಕ್ಷ ಜಮೀರ್ ಅಹಮದ್, ಗೌರವ ಕಾರ್ಯದರ್ಶಿ ಸೈಯದ್ ದಾದಾಪೀರ್, ನಿರ್ದೇಶಕರುಗಳಾದ ಹಫೀಜ್, ಮಹಮದ್ ಶಫಿ, ನಯಾಜ್ ಅಹಮದ್, ಸಾಧಿಕ್‌ಭಾಷ, ಶ್ರೀಮತಿ ಅಪ್ಸರಭಾನು, ಶ್ರೀಮತಿ ಉಮ್ಮೆ ತಸ್ಮಿಯಭಾನು, ಅಮ್ಜದ್‌ಭಾಷಾ, ಶಬ್ಬಿರ್‌ಖಾನ್ ವೇದಿಕೆಯಲ್ಲಿದ್ದರು.

ವ್ಯವಸ್ಥಾಪಕ ಎಂ.ಎ.ಐ.ಪಾಷ ಸೊಸೈಟಿಯ ವರದಿ ಮಂಡಿಸಿದರು. ಜಾನಪದ ಹಾಡುಗಾರ ಹರೀಶ್ ನಿರೂಪಿಸಿದರು. ಎಸ್.ಎಸ್.ಎಲ್.ಸಿ. ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಸದಸ್ಯರ ಮಕ್ಕಳಿಗೆ ಪ್ರತಿಭಾ ಪುರಸ್ಕರಿಸಲಾಯಿತು.ಇಲಾಹಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಸಿಬ್ಬಂದಿಯವರು ಸರ್ವ ಸದಸ್ಯರು ಮಾಜಿ ನಿರ್ದೇಶಕರುಗಳು ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಉದ್ಯಮಶೀಲತಾ ತರಬೇತಿ

» ಚಿತ್ರದುರ್ಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಇವರ ಪ್ರಾಯೋಜಕತ್ವದಲ್ಲಿ, ಧಾರವಾಡ ಸಿಡಾಕ್ ವತಿಯಿಂದ ಇದೇ ಸೆಪ್ಟಂಬರ್ ನಾಲ್ಕನೇ ವಾರದಲ್ಲಿ 10 ದಿನಗಳ ಉದ್ಯಮಶೀಲತಾ ತರಬೇತಿ ಶಿಬಿರ ಆಯೋಜಿಸಲಾಗಿದೆ. 18 ರಿಂದ 55 ವರ್ಷ ವಯೋಮಿತಿಯೊಳಗಿನ 10ನೇ ತರಗತಿ ಪಾಸಾದ ಪರಿಶಿಷ್ಟ ಪಂಗಡದ ಉದ್ಯಮಾಕಾಂಕ್ಷಿಗಳು ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಪಾಸ್‌ಪೋರ್ಟ್ ಅಳತೆಯ 2 ಫೋಟೋ ಹಾಗೂ ಆಧಾರ್ ಕಾರ್ಡ್‌ನ ಪ್ರತಿಯೊಂದಿಗೆ ನಗರದ ಜೋಗಿಮಟ್ಟಿ ರಸ್ತೆಯಲ್ಲಿನ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ನ ಸಿಡಾಕ್ ಜಂಟಿ ನಿರ್ದೇಶಕ ಕಚೇರಿ ಅಥವಾ ತರಬೇತುದಾರ ಪಿ.ವಿಜಯ್ ಕುಮಾರ್ ದೂರವಾಣಿ ಸಂಖ್ಯೆ 7760270058 ಗೆ ಸಂಪರ್ಕಿಸಬಹದು. ತರಬೇತಿ ಕಾರ್ಯಕ್ರಮವು ಉಚಿತವಾಗಿದ್ದು, ತರಬೇತಿ ವೇಳೆಯಲ್ಲಿ ಊಟೋಪಚಾರ ಒದಗಿಸಲಾಗುವುದು. ಆಯ್ಕೆಯಾದ ಶಿಬಿರಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಪ್ರಯಾಣ ಮಾಡಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

### ಸೆ.22 ರಂದು ಹಿರಿಯೂರಿನಲ್ಲಿ ದಸರಾ ಕ್ರೀಡಾ ಕೂಟ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ತಾಲ್ಲೂಕು ಪಂಚಾಯತ್‌ಗಳ ಮತ್ತು ವಿವಿಧ ಕ್ರೀಡಾ ಸಂಸ್ಥೆಗಳ ಸಹಯೋಗದಲ್ಲಿ ಇದೇ ಸೆ.22ರಂದು ಹಿರಿಯೂರು ತಾಲ್ಲೂಕು ಕ್ರೀಡಾಂಗಣದಲ್ಲಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾ ಕೂಟವನ್ನು ಆಯೋಜಿಸಲಾಗಿದೆ. ವಿವಿಧ ಅಥ್ಲೆಟಿಕ್ಸ್ ಕ್ರೀಡೆಗಳು, ವಾಲಿಬಾಲ್, ಖೋಖೋ, ಕಬಡ್ಡಿ, ಫುಟ್‌ಬಾಲ್, ಥ್ರೋಬಾಲ್, ಯೋಗ ಕ್ರೀಡೆಗಳಲ್ಲಿ ಲ್ಲಾ ವಯೋಮಾನದಕ್ರೀಡಾಪಟುಗಳುಸ್ಪರ್ಧಿಸಬಹದು. ಹೆಚ್ಚಿನ ಮಾಹಿತಿಗಾಗಿ ಹಿರಿಯೂರಿನ ಶಿವಪ್ರಸಾದ್ ಮೊ.9986615315, ವಾಲಿಬಾಲ್ ತರಬೇತುದಾರ ಮಹಮ್ಮದ್ ಮಹೀಬುಲ್ಲಾ ಅಥವಾ ಕಚೇರಿಯ ದೂರವಾಣಿ ಸಂಖ್ಯೆ: 08194-235635 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ರೈಲು ನಿಲ್ದಾಣದಲ್ಲಿ ಅನುಮಾನಸ್ಪದ ಬ್ಯಾಗ್‌ಗಳಿಂದ ಭಯದ ವಾತಾವರಣ

» ದಾವಣಗೆರೆ

ಸೆ.18 ರಂದು ರಾತ್ರಿ 12 ಗಂಟೆಗೆ ಆರ್‌ಪಿಎಫ್ ಮತ್ತು ಜಿಆರ್‌ಪಿ ಸಿಬ್ಬಂದಿಗಳು ಗಸ್ತಿನಲ್ಲಿದ್ದಾಗ ವಿಶ್ರಾಂತಿ ಕೊಠಡಿ ಹತ್ತಿರ ಅನುಮಾನಸ್ಪದವಾಗಿ ಇಟ್ಟಿದ್ದ ಬ್ಯಾಗ್‌ಗಳನ್ನು ನೋಡಿ, ಆರ್‌ಪಿಎಫ್ ಪೋಸ್ಟ್ ಕಮಾಂಡರ್ ತಿಳಿಸಲಾಗಿರುತ್ತದೆ. ತಕ್ಷಣ ಆರ್‌ಪಿಎಫ್ ಪೋಸ್ಟ್ ಕಮಾಂಡರ್ ಬಿ ಎನ್ ಕುಬೇರಪ್ಪ ನಿರೀಕ್ಷಕರಾದ ಸಂತೋಷ್ ಪಾಟೀಲ್, ಸಿಬ್ಬಂದಿಗಳೊಂದಿಗೆ ಸ್ಥಳಕ್ಕೆ ಬಂದು ಮತ್ತು ಬ್ಯಾಗ್‌ಗಳ ಸುತ್ತಲಿನ ಪ್ರದೇಶವನ್ನು ಫ್ಲೋರೆಸೆಂಟ್ ಟೇಪ್‌ಗಳ ಮೂಲಕ ಸುತ್ತುವರೆದು, ಎಲ್ಲಾ ಪ್ರಯಾಣಿಕರನ್ನು ಹತ್ತಿರದ ಪ್ರದೇಶದಿಂದ ತೆರವುಗೊಳಿಸಿ ಬಂದೋಬಸ್ತ್ ಮೂಲಕ ಪ್ರಯಾಣಿಕರ ಚಲನೆಯನ್ನು ನಿರ್ಬಂಧಿಸುತ್ತಾರೆ. ಆ ಹೊತ್ತಿಗೆ ಅಗ್ನಿಶಾಮಕ ಅಧಿಕಾರಿ ನಾಗೇಶ್ ಸ್ಥಳಕ್ಕೆ ಆಗಮಿಸಿ ವಿಧಿವಿಜ್ಞಾನ ಅಪರಾಧ ಅಧಿಕಾರಿಗಳು, ಸ್ಥಳೀಯ ಜಿಲ್ಲಾ ಪೊಲೀಸ್ ಶ್ವಾನದಳ ಮತ್ತು ವಿಧ್ವಂಸಕ ತಡೆ ತಪಾಸಣಾ ತಂಡ ಮತ್ತು ಆರ್‌ಪಿಎಫ್ ಡಾಗ್ ಸ್ಕ್ವಾಡ್ ಸ್ಥಳಕ್ಕೆ ಆಗಮಿಸಿ ಎಆರ್‌ಎಸ್‌ಐ ವೀರಭದ್ರಪ್ಪ ಮತ್ತು ಪ್ರಕಾಶ್ ಡಾಗ್ ಸ್ಕ್ವಾಡ್ ತಂಡವು ಶ್ವಾನ "ದೃತಿ" ಮತ್ತು ಶ್ವಾನ "ವಾರಿಯರ್" ಸಹಾಯದಿಂದ ಬ್ಯಾಗ್‌ಗಳನ್ನು ಪರೀಕ್ಷಿಸಿ ಸ್ಫೋಟಕ ವಸ್ತುಗಳಿದ್ದ ಚೀಲವನ್ನು ಗುರುತಿಸಿ ಬ್ಯಾಗ್‌ನ್ನು ತೆರೆದಾಗ ಒಂದು ಪಿಸ್ತೂಲ್ ಮತ್ತು ಮದ್ದುಗುಂಡುಗಳು ಇರುವುದು ಕಂಡುಬರುತ್ತದೆ. ನಂತರ ಅಪರಾಧ ದೃಶ್ಯ ತನಿಖಾಧಿಕಾರಿಗಳಾದ ದೇವರಾಜ್ ಮತ್ತು ರಘುನಾಥ್ ಅವರು ಸ್ಥಳಕ್ಕೆ ಆಗಮಿಸಿ ಸಂಪೂರ್ಣ ಪರಿಶೀಲನೆ ನಡೆಸಿ ಸ್ಥಳದಿಂದ ಮಾದರಿಗಳನ್ನು ಸಂಗ್ರಹಿಸಿ ಬ್ಯಾಗ್‌ನಲ್ಲಿರುವ ವಸ್ತುಗಳ ಅಗತ್ಯ ಮಾದರಿಗಳನ್ನು ಎಸ್‌ಒಸಿ ಕಿಟ್ ಬಳಸಿ ಎಚ್ಚರಿಕೆಯಿಂದ ಸಂಗ್ರಹಿಸಿ ಪಿಸ್ತೂಲ್ ಮತ್ತು ಮದ್ದುಗುಂಡುಗಳನ್ನು ಆರ್‌ಪಿಎಫ್ ನಿರೀಕ್ಷಕರಿಗೆ ಹಸ್ತಾಂತರಿಸಿದರು.

### ಕಲಮರಹಳ್ಳಿ ವಿದ್ಯುತ್ ವಿತರಣಾ ಕೇಂದ್ರದ ನಾಳೆ ವಿದ್ಯುತ್ ಸ್ಥಗಿತ

» ಚಳ್ಳಕೆರೆ

ನಗರದ ಬೆಂಗಳೂರು ವಿದ್ಯುತ್ ಕಂಪನಿ ಉಪವಿಭಾಗ ವ್ಯಾಪ್ತಿಯಲ್ಲಿ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರಗಳಾದ ಕಲಮರಹಳ್ಳಿ ವ್ಯಾಪ್ತಿಯಲ್ಲಿ 2ನೇ ವರ್ಷದ ತ್ರೈಮಾಸಿಕ ಕಾಮಗಾರಿ ನಿರ್ವಹಣೆ ಹಿನ್ನೆಲೆಯಲ್ಲಿ ಸೆ.21ರ ಶನಿವಾರ ಬೆಳಗ್ಗೆ 10ರಿಂದ ಸಂಜೆ5ರ ತನಕ ಚಳ್ಳಕೆರೆ ತಾಲ್ಲೂಕಿನ ಬೆಳಗೆರೆ, ಕೋನಿಗರಹಳ್ಳಿ, ತೋರೆಬೀರನಹಳ್ಳಿ, ಗೋಸಿಕೆರೆ, ದೊಡ್ಡಬೀರನಹಳ್ಳಿ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವಿತರಣೆಸ್ಥಗಿತಗೊಳಿಸಲಾಗುವುದು.

# ಸ್ವಚ್ಛತಾ ಹೀ ಸೇವಾ ಪಾಕ್ಷಿಕ: ಜಿಲ್ಲೆಯ ಎಲ್ಲಾ ಸ್ಮಾರಕಗಳು, ಸರ್ಕಾರಿ ಕಚೇರಿಗಳ ಸ್ವಚ್ಛತೆ ಕಾಪಾಡಲು ಕಾರ್ಯೋನ್ಮುಖವಾಗಲು ಸೂಚನೆ

» ದಾವಣಗೆರೆ



ಸ್ವಚ್ಚತಾ ಹೀ ಸೇವಾ ಅಭಿಯಾನವನ್ನು ಅಕ್ಟೋಬರ್ 1 ವರೆಗೆ ಸ್ವಭಾವ್ ಸ್ವಚ್ಛತಾ ಸಂಸ್ಕಾರ್ ಎಂಬ ಧ್ಯೇಯದೊಂದಿಗೆ ಆಚರಿಸಲಾಗುತ್ತಿದ್ದು ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆ, ಗ್ರಾಮ ಪಂಚಾಯಿತಿ ವ್ಯಾಪ್ತಿಯು ಸೇರಿದಂತೆ ಸ್ಮಾರಕಗಳು, ಸಾಂಸ್ಕೃತಿಕ ಭವನ ಮತ್ತು ಸರ್ಕಾರಿ ಕಚೇರಿಗಳಲ್ಲಿ ಸ್ವಚ್ಛತೆ ಕಾಪಾಡಿಕೊಂಡು ದಾಖಲೀಕರಣ ಮಾಡಬೇಕೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ಅವರು(19)ಜಿಲ್ಲಾಧಿಕಾರಿಕಚೇರಿಸಭಾಂಗಣದಲ್ಲಿ ಆಯೋಜಿಸಿದ್ದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಅಭಿಯಾನವನ್ನು ಸಾರ್ವಜನಿಕರು ಭಾಗವಹಿಸುವಿಕೆಯೊಂದಿಗೆ ನೈರ್ಮಲ್ಯಧಾರಣೆಗೆ ಪ್ರಾಶಸ್ತ್ಯ ನೀಡುವ ಮೂಲಕ ಎಲ್ಲಾ ನಾಗರಿಕರು ಗ್ರಾಮೀಣ ಪ್ರದೇಶದಲ್ಲಿ ಸಂಪೂರ್ಣ ಸ್ವಚ್ಛತೆ, ನೈರ್ಮಲ್ಯ ಸಾಧಿಸಲು ಅನುಕೂಲವಾಗುವಂತಹ ಚಟುವಟಿಕೆಗಳನ್ನು ಕೇಂದ್ರೀಕರಿಸಿ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ನಡೆಸಲಾಗುತ್ತಿದೆ. ಆದ್ದರಿಂದ ಸ್ವಚ್ಛತಾ ಹೀ ಸೇವಾ ಆಂದೋಲನದ ಭಾಗವಾಗಿ ಪ್ರತಿ ತಾಲ್ಲೂಕು, ನಗರಸಭೆ, ಪುರಸಭೆ, ಪ್ರತಿ ಗ್ರಾಮ ಪಂಚಾಯತಿ, ಪ್ರತಿ ಗ್ರಾಮಗಳಲ್ಲಿ, ಸರ್ಕಾರದ ಎಲ್ಲಾ ಇಲಾಖೆಗಳು ಸಂಬಂಧಪಟ್ಟ ಎಲ್ಲಾ ಕಚೇರಿಗಳನ್ನು ಸ್ವಚ್ಛತೆ ಮಾಡುವ ಮೂಲಕ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಆಂದೋಲನದಲ್ಲಿ ಸ್ವಯಂ ಸೇವಕರು, ಎನ್‌ಜಿಒ ಹಾಗೂ ರೆಡ್‌ಕ್ರಾಸ್ ಸಂಸ್ಥೆ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳು, ಸಾರ್ವಜನಿಕರು, ಅಧಿಕಾರಿಗಳು ಸ್ವಯಂ ಪ್ರೇರಿತವಾಗಿ ಪಾಲ್ಗೊಳ್ಳಬೇಕು. ಆಂದೋಲನಕ್ಕೆ ಸಂಬಂಧಿಸಿದಂತೆ ಎಲ್ಲ ಶಾಲಾ, ಕಾಲೇಜಿನಲ್ಲಿ ಜಾಥಾ, ಪ್ರತಿಜ್ಞಾ ವಿಧಿ ಬೋಧನೆ ಮಾಡಿಸಿ ವಿದ್ಯಾರ್ಥಿಗಳು ಹೆಚ್ಚು ಪಾಲ್ಗೊಳ್ಳುವಂತೆ ಮಾಡಬೇಕು. ಮತ್ತು ಕಡ್ಡಾಯವಾಗಿ ಸ್ವಚ್ಛತಾ ಆಂದೋಲನದ ಬಗ್ಗೆ ಪ್ರಬಂಧ, ಚರ್ಚಾ ಸ್ಪರ್ಧೆ ಹಾಗೂ ಚಿತ್ರಕಲೆ ಸ್ಪರ್ಧೆಗಳನ್ನು ಆಯೋಜಿಸಬೇಕು ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಅವರ ತಂದೆ, ತಾಯಿ ಹಾಗೂ ಪೋಷಕರಿಗೆ ಸ್ವಚ್ಛತೆಯ ಪ್ರಾಮುಖ್ಯತೆ ಬಗ್ಗೆ ಪತ್ರ ಬರೆಸಿ ಪತ್ರ ಅಭಿಯಾನ ಆಯೋಜಿಸುವಂತೆ ತಿಳಿಸಿದರು. ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡುಸ್ವಚ್ಛತಾಹೀಸೇವಾವೆಬ್‌ಸೈಟ್ https://swachhatahiseva.com ಲಿಂಕ್‌ನಲ್ಲಿ ಕಡ್ಡಾಯವಾಗಿ ಫೋಟೋಗಳನ್ನು ನಮೂದಿಸುವ ಮೂಲಕ ಸ್ವಚ್ಛತಾ ಹೀ ಸೇವಾ ಆಂದೋಲನವನ್ನು ಯಶಸ್ವಿಗೊಳಿಸಬೇಕೆಂದು ಎಂದು ತಿಳಿಸಿದ್ದಾರೆ. ಆಂದೋಲನ ಅರಿವು ಜಾಗೃತಿಯು ಜನರಿಗೆ ವೇಗವಾಗಿ, ದೃಢವಾಗಿ ತಲುಪಿಸುವ ಸ್ವಚ್ಛತಾ ಸೇವಾ ಕಾರ್ಯಕ್ರಮವನ್ನು ಉತ್ತಮವಾಗಿ ಸಂಘಟಿಸಿದ ಗ್ರಾಪಂ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅ.2 ರಂದು ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಸ್ವಚ್ಛತೆ ಮಾಡಲೇಬೇಕಿರುವ ಹೆಚ್ಚು ಅನೈರ್ಮಲ್ಯ ಹೊಂದಿರುವ ಸ್ಥಳಗಳು, ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಿ ಈ ಸ್ಥಳಗಳಲ್ಲಿ ಸ್ವಚ್ಛತಾ ಆಂದೋಲನ ನಡೆಸುವಂತೆ ತಿಳಿಸಿ. ಆಂದೋಲನದ ಅವಧಿಯಲ್ಲಿ ಇಲಾಖಾವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದರು.

ಸ್ವಚ್ಛ ಪ್ರವಾಸೋದ್ಯಮ ಪರಿಕಲ್ಪನೆ, ಪ್ರವಾಸಿ ತಾಣಗಳಲ್ಲಿನ ಶೌಚಗೃಹದಲ್ಲಿ ಶುಚಿತ್ವ ಮತ್ತು ನೈರ್ಮಲ್ಯದ ನಿರ್ವಹಣೆ ಮಾಡುವುದು ಕಡ್ಡಾಯ, ಸಾರಿಗೆ ಇಲಾಖೆಯವರು ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆ ಕಾಪಾಡಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದರೊಂದಿಗೆ ಶುಚಿತ್ವದ ಮಹತ್ವ ಸಾರುವಂತೆ ನಿಲ್ದಾಣಗಳಲ್ಲಿ ಕಸದ ತೊಟ್ಟಿ ಬುಟ್ಟಿಗಳನ್ನು ಇಡುವುದು. ಕಸ ವಿಲೇವಾರಿ ಬಗ್ಗೆ ಮಾಹಿತಿ ನೀಡುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಎಲ್ಲಾ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳು ಸೇರಿದಂತೆ ಶಾಲೆಗಳಲ್ಲಿ ಆಂದೋಲನದ ಭಾಗವಾಗಿ ಹೆಚ್ಚು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ತಿಳಿಸಿದರು.

ಸಭೆಯಲ್ಲಿ ಪಾಲಿಕೆ ಆಯುಕ್ತರಾದ ರೇಣುಕಾ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಡಾ: ಮಹಾಂತೇಶ್ ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಲಮಿತಿಯಲ್ಲಿ ಪರಿಹಾರಕ್ಕೆ ಅವಕಾಶ, ಸದ್ಬಳಕೆಗೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮನವಿ

» ದಾವಣಗೆರೆ



ಕೇಂದ್ರ ಸರ್ಕಾರದ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದಿಂದ ಮೋಟಾರು ವಾಹನಗಳ ಕಾಯಿದೆಯಡಿ ಅಪರಿಚಿತ ವಾಹನ ಡಿಕ್ಕಿಯಾಗಿ ಅಪಘಾತ ಸಂಭವಿಸಿ ಮರಣ ಹೊಂದುವ ಸಂಸ್ರಸ್ಥರಿಗೆ ಹಾಗೂ ಗಾಯಾಳುಗಳಿಗೆ ಕಾಲಮಿತಿಯಲ್ಲಿ ಪರಿಹಾರ ಪಡೆಯಲು ಅವಕಾಶ ಇದ್ದು ಅರ್ಹರು ಈ ಯೋಜನೆಯಿಂದ ವಂಚಿತರಾಗಬಾರದೆಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚನೆ ನೀಡಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಹಿಟ್ ಅಂಡ್ ರನ್ ಯೋಜನೆ ಸಮನ್ವಯ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಹಿಟ್ ಅಂಡ್ ರನ್ ಪ್ರಕರಣದಲ್ಲಿ ಅಪರಿಚಿತ ವಾಹನದಿಂದ ಅಪಘಾತವಾಗಿ ಮರಣ ಹೊಂದಿದಲ್ಲಿ ರೂ. 2 ಲಕ್ಷ ಮತ್ತು ತೀವ್ರ ಸ್ವರೂಪದ ಗಾಯಾಳುಗಳಾದಲ್ಲಿ ಯಾವುದೇ ಮಧ್ಯಸ್ಥರಿಲ್ಲದೇ ರೂ.50 ಸಾವಿರ ಪರಿಹಾರ ಪಡೆಯುವ ಯೋಜನೆ ಇದಾಗಿದೆ. ಪರಿಹಾರವನ್ನು ನೇರವಾಗಿ ಅವರ ಖಾತೆಗೆ ಯುನೈಟೆಡ್ ಇನ್ಸೂರೆನ್ಸ್ ಕಂಪನಿ ಮೂಲಕ ಪಾವತಿಸಲಾಗುತ್ತದೆ.

ಅಪಘಾತವಾಗುವ ವ್ಯಾಪ್ತಿಯ ಠಾಣೆಗಳಲ್ಲಿ ಠಾಣಾಧಿಕಾರಿಗಳು ಎಫ್‌ಐಆರ್ ದಾಖಲಿಸಿ ಹಿಟ್ ಅಂಡ್ ರನ್ ಪ್ರರಕರಣವಾಗಿದ್ದಲ್ಲಿ ಅರ್ಜಿ ನಮೂನೆ ನೀಡಿ ಮೃತರ ವಾರಸುದಾರರು ಹಾಗೂ ಗಾಯಾಳುಗಳ ಕುಟುಂಬದವರಿಗೆ ಮಾಹಿತಿ ನೀಡಬೇಕು. ತಹಶೀಲ್ದಾರ್ ಅಥವಾ ಉಪವಿಭಾಗಾಧಿಕಾರಿಗಳು ಕ್ಲೇಮ್ ತನಿಖಾಧಿಕಾರಿಗಳಾದ ಇವರಿಗೆ ಅರ್ಜಿ ಸಲ್ಲಿಸಲು ತಿಳಿಸಬೇಕು. ಈ ಬಗ್ಗೆ ಠಾಣಾಧಿಕಾರಿಗಳಿಗೂ ಮಾಹಿತಿಯ ಕೊರತೆ ಇದ್ದು ಪ್ರತ್ಯೇಕ ಸಭೆ ಮಾಡುವ ಮೂಲಕ ತರಬೇತಿ ನೀಡಲಾಗುತ್ತದೆ ಎಂದರು.

ಸಂತ್ರಸ್ಥರ ವಾರಸುದಾರರು, ಕುಟುಂಬದವರು ನಮೂನೆ-1 ರಲ್ಲಿ ವಿವರ ದಾಖಲಿಸಿ ಎಫ್‌ಐಆರ್ ಸಿ.ರಿಪೋರ್ಟ್, ಬ್ಯಾಂಕ್ ಪಾಸ್ ಬುಕ್, ನಮೂನೆ-4 ರಲ್ಲಿ ವಾರಸತ್ವ, ಮರಣೋತ್ತರ ವರದಿ, ಮರಣ ಪ್ರಮಾಣ ಪತ್ರ, ತೀವ್ರ ಗಾಯಗೊಂಡಿದ್ದಲ್ಲಿ ಆಸ್ಪತ್ರೆಯಲ್ಲಿ ಪಡೆದ ಚಿಕಿತ್ಸೆ ದಾಖಲೆ, ಆಧಾರ್ ಪ್ರತಿಯೊಂದಿಗೆ ಅಪಘಾತ ಸಂಭವಿಸಿದ ವ್ಯಾಪ್ತಿಯ ತಹಶೀಲ್ದಾರ್ ಅಥವಾ ಉಪವಿಭಾಗಾಧಿಕಾರಿಗಳ ಕಚೇರಿಗೆ ಸಂತ್ರಸ್ಥರು ಅರ್ಜಿ ಸಲ್ಲಿಸಬೇಕು.

ತಹಶೀಲ್ದಾರರು ಅಥವಾ ಉಪವಿಭಾಗಾಧಿಕಾರಿಗಳು ಪರಿಹಾರದ ಅರ್ಜಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ ನಮೂನೆ-2 ರಲ್ಲಿ ಶಿಫಾರಸಿನೊಂದಿಗೆ ಅರ್ಜಿ ಸ್ವೀಕೃತವಾದ 30 ದಿನಗಳೊಳಗಾಗಿ ಕ್ಲೈಮ್ ಸೆಟಲ್‌ಮೆಂಟ್ ಅಧಿಕಾರಿ ಜಿಲ್ಲಾಧಿಕಾರಿಯವರಿಗೆ ಸಲ್ಲಿಸಬೇಕು. 15 ದಿನಗಳೊಳಗಾಗಿ ಜಿಲ್ಲಾಧಿಕಾರಿಯವರು ಅರ್ಜಿ ಪರಿಶೀಲಿಸಿ ನಮೂನೆ-3 ರಲ್ಲಿ ಪರಿಹಾರದ ಆದೇಶ ಮಂಜೂರು ಮಾಡಿ ಜನರಲ್ ಇನ್ಸೂರೆನ್ಸ್ ಕೌನ್ಸಿಲ್‌ಗೆ ಪರಿಹಾರ ಪಾವತಿಗೆ ರವಾನಿಸುವರು. ಅಲ್ಲಿಂದ 15 ದಿನಗಳೊಳಗಾಗಿ ಸಂತ್ರಸ್ಥರ ಖಾತೆಗೆ ಹಣ ಜಮಾ ಮಾಡಲಾಗುತ್ತದೆ. ಇದು ಯೋಜನೆ ಕ್ಲೈಮ್ ಪಡೆಯುವ ಪ್ರಕ್ರಿಯೆಯಾಗಿದೆ.

ಈ ಯೋಜನೆಯಡಿ ಜಿಲ್ಲಾಧಿಕಾರಿಗಳ ಕಚೇರಿಯಿಂದ 7 ಪ್ರಕರಣಗಳಲ್ಲಿ ಪರಿಹಾರ ಒದಗಿಸಿದ್ದು 7 ಪ್ರಕರಣಗಳು ಮಂಜೂರಾತಿ ಹಂತದಲ್ಲಿವೆ. ಸಾರ್ವಜನಿಕರು ಈ ಯೋಜನೆಯ ಬಳಕೆ ಮಾಡಿಕೊಳ್ಳಬೇಕು ಮತ್ತು ಸಂಕಷ್ಟದಲ್ಲಿದ್ದವರಿಗೆ ಪರಿಹಾರ ತಲುಪುವಂತೆ ಜಾಗೃತಿ ಮೂಡಿಸಲು ಆಸ್ಪತ್ರೆ, ಪೊಲೀಸ್ ಠಾಣೆ, ಹೆದ್ದಾರಿ ಫಲಕಗಳಲ್ಲಿ ಮಾಹಿತಿ ಫಲಕ ಅಳವಡಿಸಲು ಸೂಚನೆ ನೀಡಿದರು.

## ಕ್ರೂಸರ್ ವಾಹನ ಪಲ್ಟಿ: ಮುಷ್ಕರಕ್ಕೆ ತೆರಳುತ್ತಿದ್ದ ಅಂಗನವಾಡಿ ಕಾರ್ಯಕರ್ತೆಯರಿಗೆ ಪೆಟ್ಟು



» ಚಳ್ಳಕೆರೆ

ಎಐಟಿಯುಸಿ ಕಾರ್ಮಿಕ ಸಂಘಟನೆಯ ರಾಜ್ಯ ವ್ಯಾಪ್ತಿ ಮುಷ್ಕರದಲ್ಲಿ ಪಾಲ್ಗೊಳ್ಳಲು ತೆರಳುತ್ತಿದ್ದ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಕ್ರೂಸರ್ ವಾಹನ ಟೈಯರ್ ಬ್ಲಾಸ್ಟ್ ಆಗಿ ಪಲ್ಟಿಯಾಗಿ 13ಕ್ಕೂ ಹೆಚ್ಚು ಜನರು ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಾದ ಘಟನೆ ನಡೆದಿದೆ. ಮೊಳಕಾಲ್ಮೂರು ತಾಲ್ಲೂಕಿನ ಹಿರೇಕೆರೆಹಳ್ಳಿ ಗ್ರಾಮ ಹಾಗೂ ಸುತ್ತಮುತ್ತಲ ಅಂಗನವಾಡಿ ಹಾಗೂ ಸಹಾಯಕಿಯರು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಸೆ.19 ಗುರುವಾರ ಹಮ್ಮಿಕೊಂಡಿದ್ದ ಮುಷ್ಕರದಲ್ಲಿ ಪಾಲ್ಗೊಳ್ಳಲು ಕ್ರೂಸರ್ ವಾಹನದಲ್ಲಿ ತೆರಳುತ್ತಿದ್ದರು. ಬೆಳಗಿನಜಾವ ಸುಮಾರು 5ರ ಸಮೀಪ ಸದರಿ ವಾಹನ ಬುಡ್ನಹಟ್ಟಿ ಬಳಿಯ ಶಿವಗಂಗ ಪೆಟ್ರೋಲ್ ಬಂಕ್ ಸಮೀಪ ಹಿಂಭಾಗದ ಟೈಯರ್ ಸಿಡಿದ ಕಾರಣ ವಾಹನ ಪಲ್ಟಿಯಾಗಿ ಪ್ರಯಾಣಿಸುತ್ತಿದ್ದ ಎಲ್ಲರೂ ಗಾಯಗೊಂಡಿದ್ದಾರೆ. ಗಾಯಾಳು ರುಕ್ಸಾನಪರ್ವಿನ್ ಈ ಬಗ್ಗೆ ಪೊಲೀಸರಿಗೆ ನೀಡಿದ ದೂರಿನಲ್ಲಿ ಕ್ರೂಸರ್ ವಾಹನ ಚಾಲಕ ಮಿತಿಮೀರಿದ ವೇಗ, ಅಜಾಗರಾಗರೂಕತೆಯಿಂದ ವಾಹನ ಪಲ್ಟಿಯಾಗಿ ವಾಹನದಲ್ಲಿದ್ದ ಜ್ಯೋತಿಲಕ್ಷ್ಮಿ, ಲಲಿತಮ್ಮ, ಷಂಷದ್, ಕಾವೇರಿ, ಕನಕ, ಮಮತ, ಅನಿತಾ, ಜಯಲಕ್ಷ್ಮಿ, ರಾಧಮ್ಮ, ಅಂಭಿಕ, ಚನ್ನಮ್ಮ ಹಾಗೂ ಚಾಲಕ ಮಂಜುನಾಥ ಗಾಯಗೊಂಡಿದ್ದಾರೆ. ಚಳ್ಳಕೆರೆ ಠಾಣಾಧಿಕಾರಿ ಎಚ್.ಮಂಜಪ್ಪ ಪ್ರಕರಣ ದಾಖಲಿಸಿದ್ದಾರೆ. ಎಐಟಿಯುಸಿ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ವೈ.,ಶಿವರುದ್ರಪ್ಪ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಯೋಗಕ್ಷೇಮ ವಿಚಾರಿಸಿದರು.

## ವೆಬ್ ಪೋರ್ಟಲ್‌ನಲ್ಲಿ ನೊಂದಣಿಯಾಗಿ ಅಕ್ಕಿ ದಾಸ್ತಾನು ವಿವರ ದಾಖಲಿಸಲು ಸೂಚನೆ

ದಾವಣಗೆರೆ: ಕೇಂದ್ರ ಸರ್ಕಾರವು ಅಕ್ಕಿ, ಭತ್ತದ ಘಟಕಗಳ ವ್ಯಾಪಾರಿಗಳು, ಸಗಟು ವ್ಯಾಪಾರಿ, ಚಿಲ್ಲರೆ ವ್ಯಾಪಾರಿ, ಬಿಗ್ ಚೈನ್ ರೀಟೇಲರ್, ಪ್ರೊಸೆಸರ್ಸ್, ಬ್ರೋಕನ್ ರೈಸ್, ನಾನ್-ಬಾಸ್ಮತಿ ವೈಟ್, ಪರ್ಬಾಯಿಲ್ಡ್, ಬಾಸ್ಮತಿ ಅಕ್ಕಿ ಹಾಗೂ ಭತ್ತ ದಾಸ್ತಾನು ಬಗ್ಗೆ ಕೇಂದ್ರ ಸರ್ಕಾರದ ವೆಬ್ ಪೋರ್ಟಲ್‌ನಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡು. ಪ್ರತಿ ಶುಕ್ರವಾರ ಅಕ್ಕಿ, ಭತ್ತದ ದಾಸ್ತಾನನ್ನು ವೆಬ್ ಪೋರ್ಟಲ್ https://eve oils.nic.in/login.html ಮೂಲಕ ಘೋಷಿಸಿಕೊಳ್ಳಲು ತಿಳಿಸಲಾಗಿದೆ. ನೋಂದಣಿ ಮತ್ತು ದಾಸ್ತಾನು ಘೋಷಣೆ ಸಂಬಂಧ ಸ್ಪಷ್ಟೀಕರಣ, ಸಮಸ್ಯೆ ನಿವಾರಣೆಗಾಗಿ ಕೇಂದ್ರ ಸರ್ಕಾರದ ಇ-ಮೇಲ್ wheatstock-fpd@gov.in ಅನ್ನು ಸಂಪರ್ಕಿಸಲು ತಿಳಿಸಿದೆ.

## ಸಭೆ ಮುಂದೂಡಿಕೆ

ದಾವಣಗೆರೆ: ಸೆಪ್ಟೆಂಬರ್ 24 ರಂದು ಆಯೋಜಿಸಲಾಗಿದ್ದ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯನ್ನು ಕಾರಣಾಂತರಗಳಿಂದ ಅಕ್ಟೋಬರ್ 1 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರಾ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಪೌರಕಾರ್ಮಿಕರ ಆರೋಗ್ಯದ ಬಗ್ಗೆ ನಗರಸಭೆ ಹೆಚ್ಚು ಜಾಗ್ರತೆ ವಹಿಸುತ್ತದೆ: ಜಗರೆಡ್ಡಿ

# ಪೌರಕಾರ್ಮಿಕರ ಹಿತರಕ್ಷಣೆಗೆ ನಗರಸಭೆ ಆಡಳಿತ ಬದ್ಧ

» ಚಳ್ಳಕೆರೆ



ಕಳೆದ ಹಲವಾರು ವರ್ಷಗಳಿಂದ ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಪೌರಕಾರ್ಮಿಕರಿಗೆ ಪತ್ರಿವರ್ಷ ಮೂರು ಬಾರಿ ಆರೋಗ್ಯ ಶಿಬಿರವನ್ನು ಕೈಗೊಂಡು ಅವರ ಆರೋಗ್ಯದ ಬಗ್ಗೆ ಹೆಚ್ಚು ಗಮನಹರಿಸಲಾಗುವುದು. ಯಾವುದೇ ಪ್ರಾಣಹಾನಿಯಾಗುವಂತಹ ಕಾಯಿಲೆಗಳಿದ್ದರೆ ಅವುಗಳ ಬಗ್ಗೆ ಇಲಾಖೆಯಿಂದಲೇ ಸೂಕ್ತಕ್ರಮ ಕೈಗೊಳ್ಳಲಾಗುವುದು ಎಂದು ಪೌರಾಯುಕ್ತ ಎಚ್.ಜಿ.ಜಗರೆಡ್ಡಿ ತಿಳಿಸಿದರು.

ಅವರು ಗುರುವಾರ ನಗರಸಭೆ ವ್ಯಾಪ್ತಿಯ ರಮಾಬಾಯಿ ಸಮುದಾಯದ ಭವನದಲ್ಲಿ ಪೌರಕಾರ್ಮಿಕರ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಈ ಸಂದರ್ಭದಲ್ಲಿ ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಪೌರಕಾರ್ಮಿಕರು ಕಡ್ಡಾಯವಾಗಿ ಹಾಜರಿದ್ದು, ತಜ್ಞ ವೈದ್ಯರಿಂದ ತಮ್ಮ ಆರೋಗ್ಯವನ್ನು ಪರೀಕ್ಷೆಗೆ ಒಳಪಡಿಸಬೇಕು. ವೈದ್ಯರು ಎಲ್ಲಾ ರೀತಿಯ ಪರೀಕ್ಷೆ ನಡೆಸಿ ಸಮಸ್ಯೆಗಳಿದ್ದಲ್ಲಿ ಮಾಹಿತಿ ನೀಡುತ್ತಾರೆ. ಇಂದಿನ ಆರೋಗ್ಯ ತಪಾಸಣಾ ಶಿಬಿರದಲ್ಲೂ ನಗರಸಭೆಯ ಸುಮಾರು 94 ಹೆಚ್ಚು ಪೌರಕಾರ್ಮಿಕರು ಆರೋಗ್ಯ ತಪಾಸಣೆಗೆ ಒಳಗಾಗಿದ್ದಾರೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಹಿರಿಯ ಆರೋಗ್ಯಾಧಿಕಾರಿ ಗಣೇಶ್, ವರ್ಷಕ್ಕೆ ಮೂರು ಬಾರಿ ಹಂತ, ಹಂತದಲ್ಲಿ ಪೌರಕಾರ್ಮಿಕರ ಆರೋಗ್ಯ ತಪಾಸಣಾ ಶಿಬಿರವನ್ನು ನಡೆಸಲಾಗುತ್ತದೆ. ಪೌರಕಾರ್ಮಿಕರು ಸ್ವಚ್ಛತೆಯೂ ಸೇರಿದಂತೆ ಯಾವುದೇ ಕೆಲಸ ನಿರ್ವಹಿಸಬೇಕಾದಲ್ಲಿ ಅವರಿಗೆ ರಕ್ಷಾ ಕವಚಗಳನ್ನು ನೀಡಲಾಗುತ್ತದೆ. ಪೌರಕಾರ್ಮಿಕರ ಆರೋಗ್ಯದ ಬಗ್ಗೆ ನಗರಸಭೆ ಹೆಚ್ಚು ಗಮನ ನೀಡುತ್ತಾ ಬಂದಿದೆ. ಪೌರಕಾರ್ಮಿಕರೂ ಸಹ ಆರೋಗ್ಯ ತಪಾಸಣೆಗೆ ಸ್ವಯಂ ಪ್ರೇರಣೆಯಿಂದ ಒಳಗಾಗುತ್ತಾರೆಂದರು.

ನಗರಸಭೆ ಉಪಾಧ್ಯಕ್ಷೆ ಓ.ಸುಜಾತ ಮಾತನಾಡಿ, ಈ ಹಿಂದೆ ಪೌರಕಾರ್ಮಿಕರ ರಕ್ಷಣೆಯ ಬಗ್ಗೆ ಹೆಚ್ಚು ಗಮನಹರಿಸಲು ಸಾಧ್ಯವಾಗಿರಲಿಲ್ಲ. ಅವರ ಆರೋಗ್ಯದ ಬಗ್ಗೆ ನಗರಸಭೆ ಆಡಳಿತ ಹೆಚ್ಚು ಮುತುವರ್ಜಿ ವಹಿಸುತ್ತದೆ. ವಿಶೇಷವಾಗಿ ಕೊರೋನಾದಂತಹ ಭಯಾನಕ ರೋಗಗಳನ್ನುತಡೆಯಲು ಪೌರಕಾರ್ಮಿಕರ ಸೇವಾಕಾರ್ಯವೇ ಪ್ರಮುಖವಾಗಿದೆ. ಆದ್ದರಿಂದ ಅವರ ಆರೋಗ್ಯ ತಪಾಸಣೆಗೆ ಹೆಚ್ಚು ಒತ್ತು ನೀಡಲಾಗುತ್ತದೆ ಎಂದರು.

ಸದಸ್ಯ ಕೆ.ವೀರಭದ್ರಪ್ಪಮಾತನಾಡಿದರು. ನಗರಸಭೆ ಅಧ್ಯಕ್ಷೆ ಜೈತುಂಬಿ, ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಎಂ.ಜೆ. ರಾಘವೇಂದ್ರ, ಆರೋಗ್ಯಾಧಿಕಾರಿಗಳ ಸುನೀಲ್, ಗೀತಾಕುಮಾರಿ, ರುದ್ರಮುನಿ, ಡಾ.ಸಂದೀಪ್ ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಪರಿಶ್ರಮದ ಮೂಲಕ ವಿದ್ಯೆ ಪಡೆದು ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಿ: ವಯನಾಡು ಡಿಸಿ ಮೇಘಶ್ರೀ



» **ಚಳ್ಳಕೆರೆ**

ಖಾಸಗಿ ವಿದ್ಯಾಸಂಸ್ಥೆಗಳೂ ಸಹ ಶೈಕ್ಷಣಿಕ ಪ್ರಗತಿಗೆ ಸಾಕಷ್ಟು ಪರಿಶ್ರಮವಹಿಸುತ್ತಿವೆ. ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಿ, ಅವರ ಭವಿಷ್ಯದ ಬದುಕನ್ನು ಉಜ್ವಲಗೊಳಿಸುವಂತಹ ಶಿಕ್ಷಣವನ್ನು ನಮ್ಮ ಶಿಕ್ಷಕರು ನೀಡಬೇಕಿದೆ. ಯಾವುದೇ ಸಂದರ್ಭದಲ್ಲೂ ವಿದ್ಯಾರ್ಥಿಗಳ ಕಲಿಕೆಗೆ ದಕ್ಕೆಯಾಗದಂತೆ ಎಲ್ಲಾ ಹಂತದಲ್ಲೂ ಶಿಕ್ಷಕರು, ಆಡಳಿತ ಮಂಡಳಿ ಮುಂಜಾಗ್ರತೆ ವಹಿಸಬೇಕೆಂದು ಕೇರಳ ರಾಜ್ಯ ವಯನಾಡು ಜಿಲ್ಲಾಧಿಕಾರಿ ಆರ್. ಮೇಘಶ್ರೀ ತಿಳಿಸಿದರು. ಅವರು, ಖಾಸಗಿ ಕಾರ್ಯಕ್ರಮ ನಿಮಿತ್ತ ತಮ್ಮ ಹುಟ್ಟೂರು ದೊಡ್ಡೇರಿಗೆ ಆಗಮಿಸಿದ ಸಂದರ್ಭದಲ್ಲಿ ಪ್ರಗತಿ ವಿದ್ಯಾಲಯ ಆಡಳಿತ ಮಂಡಳಿ ಮನವಿ ಮೇರೆಗೆ ಶಾಲೆಗೆ ಭೇಟಿ ನೀಡಿದ್ದರು. ನಗರಂಗೆರೆಯಂತಹ ಗ್ರಾಮದಲ್ಲಿ ಭವ್ಯವಾದಶಾಲಾ ಕಟ್ಟಡ ನಿರ್ಮಿಸಿ ಸಾವಿರಾರು ಮಕ್ಕಳಿಗೆ ವಿದ್ಯಾದಾನ ಮಾಡುವ ಶಾಲಾ ಆಡಳಿತ ಮಂಡಳಿ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ಶಿಕ್ಷಕರು ನೀಡುವ ಬೋಧನೆಯನ್ನು ಅರ್ಥೈಸಿಕೊಳ್ಳುವಲ್ಲಿ ಹಿಂದೆಬೀಳಬಾರದು. ಯಾವುದೇ ವಿಚಾರದಲ್ಲಿ ಸಂದೇಹ ಉಂಟಾದಲ್ಲಿ ಕೂಡಲೇ ಶಿಕ್ಷಕರನ್ನು ಸಂಪರ್ಕಿಸಬೇಕು, ಶಿಕ್ಷಣದಲ್ಲಿ ಪ್ರಗತಿಯನ್ನು ಸಾಧಿಸಬೇಕೆಂಬ ಸಂಕಲ್ಪವನ್ನು ವಿದ್ಯಾರ್ಥಿಗಳು ಮಾಡಬೇಕು ಎಂದರು. ಪ್ರಗತಿವಿದ್ಯಾಲಯದ ಪ್ರಾಂಶುಪಾಲೆ ಡಾ.ಚಿತ್ರಸುಬ್ರಮಣ್ಯಂ ಮಾತನಾಡಿ, ನಮ್ಮ ವಿದ್ಯಾಸಂಸ್ಥೆಗೆ ನಮ್ಮ ತಾಲ್ಲೂಕಿನವರಾದ ಜಿಲ್ಲಾಧಿಕಾರಿಗಳು ಆಗಮಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದಾರೆ. ಅವರು ನಿಮ್ಮಂತೆಯೇ ಶಾಲೆಯಲ್ಲಿ ಕಲಿತು ಉತ್ತಮ ಭವಿಷ್ಯವನ್ನು ರೂಪಿಸಿಕೊಂಡವರು. ವಿದ್ಯಾರ್ಥಿಗಳಿಗೂ ಸಹ ಅವರ ಮಾರ್ಗದರ್ಶನ ದೊರೆಯಲಿ ಎಂದು ಅವರನ್ನು ಆಮಂತ್ರಿಸಿದ್ದೇವು, ಅವರು ಆಗಮಿಸಿ ಶಾಲಾ ಮಕ್ಕಳಿಗೆ ಉತ್ತಮ ಸಲಹೆ,. ಸೂಚನೆ ನೀಡಿದ್ದು, ಆಡಳಿತ ಮಂಡಳಿ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಡಾ.ಮೇಘಶ್ರೀ ತಂದೆ ರುದ್ರಮುನಿಯಪ್ಪ, ಪತಿ ವಿಕ್ರಂಸಿಂಹ, ಪ್ರಗತಿ ವಿದ್ಯಾಲಯದ ನಿರ್ದೇಶಕ ಕೆ.ರಮೇಶ್‌ಬಾಬು, ಶ್ರೀನಿವಾಸ್, ಆಡಳಿತಾಧಿಕಾರಿ ವೈಷ್ಣವಿಧಗೆ, ಕೋಆಡಿನೇಟರ್ ಮಾಲೀನಿಜಾನ್, ವಿ.ವಾಣಿ, ಎಂ.ನಾಗೇಶ್, ವೈ.ಕಾವ್ಯ ಮುಂತಾದವರು ಉಪಸ್ಥಿತರಿದ್ದರು. ಸಂಸ್ಥೆಯ ಕಾರ್ಯದರ್ಶಿ ಕೆ.ಆರ್ಚನ ಸ್ವಾಗತಿಸಿ ವಂದಿಸಿದರು.

## ಗೊಲ್ಲ ನೌಕರರ ಸಂಘದಿಂದ ಸೆ.22ರಂದು ಪ್ರತಿಭಾಪುರಸ್ಕಾರ

» **ಚಳ್ಳಕೆರೆ**

ತಾಲ್ಲೂಕಿನ ಗೊಲ್ಲ ನೌಕರರ ಸಂಘದ ವತಿಯಿಂದ ಸಮುದಾಯದ ಮಕ್ಕಳಿಗೆ ಪ್ರತಿಭಾಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ ಕಾರ್ಯಕ್ರಮವನ್ನು ಸೆ.22ರ ಭಾನುವಾರ ಯಾದವರ ಹಾಸ್ಟಲ್‌ನಲ್ಲಿ ಹಮ್ಮಿಕೊಂಡಿದೆ ಎಂದು ಗೊಲ್ಲನೌಕರರ ಸಂಘದ ಅಧ್ಯಕ್ಷ ಕೆ.ಎಸ್.ಶ್ರೀಕಾಂತ್ ತಿಳಿಸಿದ್ದಾರೆ. ಅವರು, ನಗರದ ಯಾದವ ಹಾಸ್ಟಲ್‌ನಲ್ಲಿ ನಡೆದ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಅಂದು ಬೆಳಗ್ಗೆ 11ಗಂಟೆಗೆ ಕಾರ್ಯಕ್ರಮವನ್ನು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಉದ್ಘಾಟಿಸಲಿದ್ದು, ಉಪನ್ಯಾಸವನ್ನು ಬಳ್ಳಾರಿ ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಕೆಂಗೇಗೌಡ್ರು ನೀಡುವರು. ಗೊಲ್ಲ ಸಂಘದ ಅಧ್ಯಕ್ಷ ಟಿ.ರವಿಕುಮಾರ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ ಮುಂತಾದ ಭಾಗವಹಿಸುವರು.



# ಚರ ಜಂಗಮನಾಗಿ ಕಾಡಿನಲ್ಲಿ ನಡೆಯುತ್ತಾ ಇರುವಾಗ.....

ದಟ್ಟ ಕಾನನದ ನಡುವೆ,
ನಿಶ್ಯಬ್ದ ನೀರವತೆಯ ಒಳಗೆ,
ನಿರ್ಜನ ಪ್ರದೇಶದ ಹಾದಿಯಲ್ಲಿ,
ಏರಿಳಿವ ತಿರುವುಗಳ ದಾರಿಯಲ್ಲಿ,
ಸಣ್ಣ ಭೀತಿಯ ಸುಳಿಯಲ್ಲಿ,
ಪಕ್ಷಿಗಳ ಕಲರವ,
ಕೀಟಗಳ ಗುಂಯ್ಗುಡುವಿಕೆ,
ಪ್ರಾಣಿಗಳ ಕೂಗಾಟ,
ಹಾವುಗಳ ಸರಿದಾಟ,
ಗಿಡಮರಗಳ ನಲಿದಾಟ,
ಮೋಡಗಳ ನೆರಳು ಬೆಳಕಿನಾಟ,
ಮಿಂಚು ಗುಡುಗುಗಳ ಆರ್ಭಟ,
ಮಳೆ ಹನಿಗಳ ಚೆಲ್ಲಾಟ,
ವಾಹನಗಳ ಸುಳಿದಾಟ,
ನರ ಮನುಷ್ಯರ ಅಲೆದಾಟ,
ಹೊಳೆ ಕಾಲುವೆಗಳ ಜುಳು ಜುಳು ನಾದ,
ಸೇತುವೆಗಳ ಕುಲುಕಾಟ,
ಮಾವು ತೆಂಗು ಸೀಬೆ ಅಡಿಕೆ,
ಬೀಟೆ ಹೊನ್ನೆ ತೇಗು ನೀಲ.......
ಪ್ರವಾಸಿಗನೋರ್ವನ ಭಾವನೆಗಳ ಚೀಲ ತುಂಬಿ ಹೊರಚೆಲ್ಲುತ್ತಿದೆ,....
ಹೇಗೆ ಹಿಡಿದಿಡಲಿ ಅಕ್ಷರಗಳಲ್ಲಿ,
ಆ ಅನುಭವವನ್ನು.......

ಕೊರೋನಾ ಹಾವಳಿ ಮತ್ತೆ ನನ್ನ ಜನರನ್ನು ಕಾಡುತ್ತಿರುವಾಗ,

ಸಾವು ನೋವುಗಳ ಸಂಕಟದ ಸುದ್ದಿಗಳು ಅಪ್ಪಳಿಸುತ್ತಿರುವಾಗ,

ನಾನು ಕೂಡಾ ಅಸಹಾಯಕ...

ಆದರೂ ಮನಸ್ಸುಗಳ ಅಂತರಂಗದ ಚಳವಳಿ ನಿಮಗಾಗಿ.........

ಕೊರೋನಾ ಸಂದರ್ಭದ ಆತ್ಮವಿಶ್ವಾಸದ ನುಡಿಗಳು.....

ಪ್ರೇಯಸಿಯೊಬ್ಬಳು ತನ್ನ ಕೊರೋನಾ ಪೀಡಿತ ಪ್ರಿಯಕರನಿಗೆ ಮೊಬೈಲ್ ನಲ್ಲಿ ಹೀಗೆ



ಪಿಸುಗುಟ್ಟಿದಳು....

" ಚಿನ್ನ ನಿನ್ನೊಳಗಿರುವ ವೈರಸ್ ಗೆ ನನ್ನ ಪ್ರೀತಿಯನ್ನು ಗೆಲ್ಲುವ ಶಕ್ತಿ ಖಂಡಿತ ಇಲ್ಲ. ನಿನ್ನೊಳಗೆ ಇರುವುದು ನನ್ನ ಪ್ರೀತಿಯ ವೈರಸ್.

ಅದು ಕೊರೋನಾ ವೈರಸ್ ಅನ್ನು ಒದ್ದೋಡಿಸುತ್ತದೆ ಧೈರ್ಯವಾಗಿರು.

ಇಲ್ಲಿಂದಲೇ ನನ್ನ ಬಿಸಿಯಪ್ಪುಗೆಯ ಸಿಹಿ ಮುತ್ತುಗಳು "

ಕೊರೋನಾ ಪೀಡಿತ ತಾಯಿಗೆ ಒಬ್ಬನೇ ಮಗನ ನೇರ ನುಡಿಗಳು....

" ಅಮ್ಮ ನನಗೆ ನೀನು ಜೀವ ಕೊಟ್ಟಿರುವಾಗ ನಾನು ನಿನ್ನ ಜೀವವನ್ನು ಉಳಿಸದಿರುವೆನೇ,

ವೈರಸ್ ಇರಲಿ, ಕ್ಯಾನ್ಸರ್ ಇರಲಿ ನನ್ನಮ್ಮ ನೂರು ವರ್ಷ ನನ್ನ ಜೊತೆ ಇರಲೇಬೇಕು. ಇರುತ್ತಾಳೆ. ಸಾಧ್ಯವಾದರೆ ಮತ್ತೊಮ್ಮೆ ನಿನ್ನ ದೇಹ ಪ್ರವೇಶಿಸಿ ವೈರಸ್ ಕೊಲ್ಲುತ್ತೇನೆ. ಅಮ್ಮ ಧೈರ್ಯವಾಗಿರು "

ಸ್ನೇಹಿತನೊಬ್ಬ ತನ್ನ ಗೆಳೆಯ ಕೊರೋನಾದಿಂದ ಕ್ವಾರಂಟೈನ್ ಆಗಿರುವಾಗ ಕಳುಹಿಸಿದ ಘಾಚಿಣಚಿಔಿ ಸಂದೇಶ ಹೀಗಿದೆ....

" ಗೆಳೆಯ ನಿನಗಾಗಿ ನಾನು ಸಾವಿನ ಮನೆಯ ಬಾಗಿಲನ್ನು ಮುಚ್ಚಿಸಿರುವೆ. ಆದ್ದರಿಂದ ನೀನು ನನ್ನ ಜೊತೆಯೇ ಇರುವೆ. ಧೈರ್ಯವಾಗಿರು. ಸಾವು ನಿನ್ನನ್ನು ಸಂಧಿಸಲು ಸಾಧ್ಯವಿಲ್ಲ "

ಮಗುವೊಂದು ಆಸ್ಪತ್ರೆಗೆ ದಾಖಲಾಗಿರುವ ತನ್ನ ತಂದೆ ತಾಯಿಯ ಆರೋಗ್ಯ ಕುರಿತು ಹೀಗೆ ಪತ್ರ ಬರೆಯಿತು.....

" ಅಮ್ಮ ಅಪ್ಪಾ ನಾನು ದೇವರಿಗೆ ಒಂದು ಪ್ರಾರ್ಥನಾ ಪತ್ರ ಬರೆದಿದ್ದೇನೆ. ಅದರಲ್ಲಿ ನಿಮ್ಮಿಬ್ಬರನ್ನೂ ಬೇಗ ಆರೋಗ್ಯವಾಗಿ ಮನೆಗೆ ಕಳುಹಿಸುವಂತೆ ಕೇಳಿದ್ದೇನೆ. ನೀವು ಧೈರ್ಯವಾಗಿರಿ. ನಿಮಗೆ ಏನೂ ಆಗುವುದಿಲ್ಲ. ಬೇಗ ಮನೆ ತಲುಪಿ "

ಹಾಗೆಯೇ ಕೋವಿಡ್ ಪೀಡಿತ ಗೆಳೆಯರಿಗೆ ನನ್ನದೊಂದು ಪ್ರೀತಿಯ ಸಲಹೆ.....

" ಗೆಳೆಯರೆ, ಆಕ್ಸಿಜನ್ – ಬೆಡ್ – ವೆಂಟಿಲೇಟರ್ – ಟ್ಯಾಬ್ಲೆಟ್ – ಇಂಜೆಕ್ಷನ್ – ಮುಂತಾದ ವಿಷಯಗಳಿಗೆ ಸಿನಿಕರಾಗದೆ, ಸಾವಿಗೆ ಅತಿಯಾಗಿ ಹೆದರದೆ, ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ದಯವಿಟ್ಟು ಒಂದಷ್ಟು ಸಂಯಮವಹಿಸಿ. ತಮ್ಮೆಲ್ಲಾ ಮಾನಸಿಕ ಬಲವನ್ನು ಒಗ್ಗೂಡಿಸಿ ಹೋರಾಡಿ. ದೇಹ ಮತ್ತು ಮನಸ್ಸನ್ನು ಆದಷ್ಟು ಚಟುವಟಿಕೆಯಿಂದ ಇಟ್ಟುಕೊಳ್ಳಿ. ಕೊನೆಯವರೆಗೂ ಶರಣಾಗತರಾಗಬೇಡಿ. ಎಲ್ಲರಿಗೂ ಒಳ್ಳೆಯದಾಗಲಿ "

ಏಕೆಂದರೆ ಮತ್ತೆ ಕೋವಿಡ್ ಭೂತ ಮಾಧ್ಯಮಗಳ ಮೂಲಕ ಎಲ್ಲರನ್ನು ಕಾಡತೊಡಗಿದೆ. ಆದ್ದರಿಂದ ಒಂದಷ್ಟು ಧೈರ್ಯ ತುಂಬುವ ಕೆಲಸ ಮಾಡಬೇಕಾಗಿದೆ.........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
ವಿವೇಕಾನಂದ. ಹೆಚ್.ಕೆ.
9844013068

## ಸ್ವಚ್ಛತಾ ಹೀ ಸೇವಾ ಪಾಕ್ಷಿಕ; ಪ್ರತಿಜ್ಞಾವಿಧಿ ಬೋಧನೆ

» **ದಾವಣಗೆರೆ**

ಅಕ್ಟೋಬರ್ 1 ರವರೆಗೆ ಸ್ವಚ್ಛತಾ ಹೀ ಸೇವಾ ಅಭಿಯಾನದ ಅಂಗವಾಗಿ ಸ್ವಚ್ಛತಾ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿದ್ದು ಗುರುವಾರ ಸಂಗೊಳ್ಳಿ ರಾಯಣ್ಣ ವೃತ್ತದ ಬಳಿ ಮಹಾನಗರಪಾಲಿಕೆ ವತಿಯಿಂದ ಆಯೋಜಿಸಲಾಗಿದ್ದ ಸ್ವಚ್ಚತೆಯೇ ಸೇವೆ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಪಾಲಿಕೆ ಮೇಯರ್ ವಿನಾಯಕ್ ಬಿ.ಹೆದ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್



ಹಾಗೂ ಪಾಲಿಕೆ ಸದಸ್ಯರು ಭಾಗವಹಿಸುವ ಮೂಲಕ ಸ್ವಚ್ಛತೆ ಮಾಡಿ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ನಾನು ಸ್ವಚ್ಛತೆಗೆ ಬದ್ಧನಾಗಿರುತ್ತೇನೆ ಮತ್ತು ಇದಕ್ಕಾಗಿ ಸಮಯವನ್ನು ವಿನಿಯೋಗಿಸುತ್ತೇನೆ, ಸ್ಥಳೀಯ ಸಂಸ್ಥೆಗಳ ಕಸ ಸಂಗ್ರಹ ವಾಹನಗಳಿಗೆ ಕಸವನ್ನು ಸಂಗ್ರಹಿಸಿ ನೀಡುತ್ತೇನೆ.

ಯಾವುದೇ ರೀತಿಯ ಕಸವನ್ನು ಹೊರಗಡೆ ಎಲ್ಲಿಯೂ ಎಸೆಯುವುದಿಲ್ಲ ಎಂದು ಪ್ರತಿಜ್ಞಾ ವಿಧಿ ಭೋಧಿಸಲಾಯಿತು.

ನಂತರ ಎಲ್ಲಾ ಅಧಿಕಾರಿಗಳೊಂದಿಗೆ ಪಿ.ಬಿ.ರಸ್ತೆ ಸುತ್ತಮುತ್ತ ಪೊರಕೆಹಿಡಿಯುವ ಮೂಲಕ ಜೊತೆಗೂಡಿ ಕಸವನ್ನು ಗುಡಿಸಿ ನಗರವನ್ನು ಸ್ವಚ್ಚತೆ ಮಾಡುವಲ್ಲಿ ಕಾರ್ಮಿಕರಿಗೆ ಹಾಗೂ ಸಿಬ್ಬಂದಿಯವರಿಗೆ ಸಲಹೆ ನೀಡಿದರು.

ಅಪರ ಜಿಲ್ಲಾಧಿಕಾರಿ ಲೋಕೇಶ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ನಾಗರಾಜ, ಪಾಲಿಕೆ ಆಯುಕ್ತರಾದ ರೇಣುಕಾ, ಸದಸ್ಯರಾದ ಕೆ.ನಾಗರಾಜ ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

## ನ್ಯಾಮತಿ ಮರಿಗೊಂಡನಹಳ್ಳಿ ಶಿವರಾಜ್ ಕೊಲೆ, ಪತ್ನಿ ಚೈತ್ರಾಗೆ ರೂ.4,12,500 ರೂ.ಗಳ ಪರಿಹಾರ

» **ದಾವಣಗೆರೆ**

ದಾವಣಗೆರೆ ಜಿಲ್ಲೆ ನ್ಯಾಮತಿ ತಾಲೂಕಿನ ಮರಿಗೊಂಡನಹಳ್ಳಿಯಲ್ಲಿ ಸೆಪ್ಟೆಂಬರ್ 18 ರಂದು ಪ.ಜಾತಿಯವರಾದ ಶಿವರಾಜ್ ಇವರಿಗೆ ಇದೇ ಗ್ರಾಮದವರು ವೈಯಕ್ತಿಕ ದ್ವೇಷದಿಂದ ಕೊಲೆ ಮಾಡಿದ್ದು ಜಿಲ್ಲಾಡಳಿತವು ಕೊಲೆಯಾದ ಶಿವರಾಜ್ ಇವರ ಪತ್ನಿ ಸಂತ್ರಸ್ಥೆಯಾದ ಚೈತ್ರಾಗೆ ಒಂದೇ ದಿನದಲ್ಲಿ ರೂ.4,12,500 ರೂ.ಗಳ ಪರಿಹಾರದ ಚೆಕ್‌ನ್ನು ನೀಡುವ ಮೂಲಕ ಮಾನವೀಯತೆ ಮರೆಯಲಾಗಿದೆ. ಪರಿಶಿಷ್ಟ ಜನಾಂಗದವರ ಮೇಲೆ ದೌರ್ಜನ್ಯವಾಗಿ ಸಂತ್ರಸ್ಥರಾದವರಿಗೆ ತಕ್ಷಣ ಪರಿಹಾರ ನೀಡುವ ಯೋಜನೆ ಇದಾಗಿದ್ದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿಯವರ ಆದೇಶದಂತೆ ಎಫ್‌ಐಆರ್ ಮತ್ತು ಮರಣೋತ್ತರ ಪರೀಕ್ಷೆ ಆಧಾರದ ಮೇಲೆ ಸಂತ್ರಸ್ಥರ ಬ್ಯಾಂಕ್ ಖಾತೆಗೆ ಖಜನೆ ಮೂಲಕ ಮಂಜೂರಾತಿ ಮಾಡಿ ಆದೇಶಿಸಲಾಗಿರುತ್ತದೆ. ಇದೇ ಘಟನೆಯಲ್ಲಿ ಮತ್ತೊಬ್ಬ ಸಂತ್ರಸ್ಥ ಭರತ ತಂದೆ ರಮೇಶ್ ಇವರು ಸಹ ಗಾಯಾಳುಗಳಾಗಿದ್ದು ಶಿವಮೊಗ್ಗ ಮೆಗಾನ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.



ಇವರಿಗೂ ಎಫ್‌ಐಆರ್ ಹಂತದಲ್ಲಿ ರೂ 50,000 ಗಳನ್ನು ಸಂತಸ್ಥರ ಬ್ಯಾಂಕ್ ಖಾತೆಗೆ ಆರ್‌ಟಿಜಿಎಸ್ ಮೂಲಕ ಜಮೆ ಮಾಡಲಾಗಿರುತ್ತದೆ. ದಾವಣಗೆರೆ ಜಿಲ್ಲಾಡಳಿತವು ತ್ವರಿತಗತಿಯಲ್ಲಿ ಸಂತ್ರಸ್ತರಿಗೆ ಪರಿಹಾರ ಮಂಜೂರಾತಿ ಮಾಡಿ ಆದೇಶಿಸಲಾಗಿದೆ. ಹಾಗೂ ನೊಂದವರ ಕುಟುಂಬಕ್ಕೆ ಆಹಾರ ಸಾಮಗ್ರಿಗಳನ್ನು ಸಹ ವಿತರಣೆ ಮಾಡಲಾಗಿದ್ದು ಸಂತಸ್ಥರಿಗೆ ಸಾಂತ್ವನ ತಿಳಿಸಿ ಕಾನೂನು ನೆರವು ನೀಡಲಾಗಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T